# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 75 | ರಾಯಚೂರು Raichur | 07-09-2026 | ಸೋಮವಾರ Monday | ಪುಟ: Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685


ವಿಶ್ವಕಪ್ 2026: ಶಫಾಲಿ ವರ್ಮಾ ಗೆ ಫೆವಿಲಿಯನ್ ಗೆ ಹೋಗು ಎನ್ನುವಂತೆ ಕೈ ಸನ್ನೆ, ಪಾಕ್ ನಾಯಕಿ ವಿರುದ್ಧ ಭಾರತೀಯರ ಆಕ್ರೋಶ, ಟ್ರೋಲ್! Video




# ಇರಾನ್ ಕ್ಷಿಪಣಿ ದಾಳಿಗೆ ಅಮೆರಿಕ ಪ್ರತಿದಾಳಿ, ಮೂರು ತೈಲ ಟ್ಯಾಂಕರ್‌ಗಳು ಗುರಿ

ಟೆಹ್ರಾನ್: ಹಾರ್ಮುಜ್ ಜಲಸಂಧಿ ಪ್ರದೇಶದಲ್ಲಿ ಅಮೆರಿಕ ಮತ್ತು ಇರಾನ್ ನಡುವಿನ ಸಂಘರ್ಷ ಮತ್ತಷ್ಟು ತೀವ್ರಗೊಂಡಿದೆ. ಅಮೆರಿಕದ ನೌಕಾಪಡೆಯ ಯುದ್ಧನೌಕೆಗಳತ್ತ ಇರಾನ್ ಬ್ಯಾಲಿಸ್ಟಿಕ್ ಕ್ಷಿಪಣಿ ದಾಳಿ ನಡೆಸಲು ಯತ್ನಿಸಿದ ಬೆನ್ನಲ್ಲೇ, ಅಮೆರಿಕ ಪಡೆಗಳು ಪ್ರತಿದಾಳಿ ನಡೆಸಿ ಇರಾನ್‌ಗೆ ಸಂಬಂಧಿಸಿದ ಮೂರು ತೈಲ ಟ್ಯಾಂಕರ್‌ಗಳನ್ನು ಗುರಿಯಾಗಿಸಿಕೊಂಡಿವೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ (CENTCOM) ತಿಳಿಸಿದೆ.

ಅಮೆರಿಕದ ಪ್ರಕಾರ, ಕಾರ್ಯಾಚರಣೆಯಲ್ಲಿ M/T Downy, M/T Stark 1 ಹಾಗೂ M/T Kylo ಹೆಸರಿನ ಮೂರು ತೈಲ ಸಾಗಣೆ ಹಡಗುಗಳನ್ನು ಗುರಿಯಾಗಿಸಲಾಗಿದೆ. ಇವು ಇರಾನ್‌ನ ಇಸ್ಲಾಮಿಕ್




ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ (IRGC)ಗೆ ಸಂಬಂಧಿಸಿದ ತೈಲ ಸಾಗಣೆ ಜಾಲದ ಭಾಗವಾಗಿವೆ ಎಂದು CENTCOM ಆರೋಪಿಸಿದೆ.

ಅಮೆರಿಕದ ದಾಳಿಗೆ ಇರಾನ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ತನ್ನ ವಾಣಿಜ್ಯ ಹಡಗುಗಳ ಮೇಲೆ ನಡೆದ ದಾಳಿಯನ್ನು ಕಾನೂನುಬಾಹಿರ ಮತ್ತು ಆಕ್ರಮಣಕಾರಿ ಕ್ರಮ ಎಂದು ಖಂಡಿಸಿದೆ. ಇಂತಹ ದಾಳಿಗಳು ಮುಂದುವರಿದರೆ ಅಮೆರಿಕದ ವಿರುದ್ಧ ಇನ್ನಷ್ಟು ತೀವ್ರ ಪ್ರತೀಕಾರ ಕೈಗೊಳ್ಳಲಾಗುವುದು ಎಂದು ಇರಾನ್ ಎಚ್ಚರಿಕೆ ನೀಡಿದೆ.

ಕಳೆದ ಕೆಲವು ತಿಂಗಳುಗಳಿಂದ ಎರಡೂ ರಾಷ್ಟ್ರಗಳ ನಡುವಿನ ಉದ್ವಿಗ್ನತೆ ಮುಂದುವರಿದಿದ್ದು, ಹಾರ್ಮುಜ್ ಜಲಸಂಧಿಯ ಮೇಲಿನ ನಿಯಂತ್ರಣ ಹಾಗೂ ತೈಲ ಸಾಗಣೆ ಮಾರ್ಗದ ಭದ್ರತೆ ಇದೀಗ ಸಂಘರ್ಷದ ಪ್ರಮುಖ ಕೇಂದ್ರಬಿಂದುವಾಗಿ ಪರಿಣಮಿಸಿದೆ.

CENTCOM ನೀಡಿರುವ ಮಾಹಿತಿಯ ಪ್ರಕಾರ, ಇರಾನ್‌ನ IRGCಗೆ ಸಂಬಂಧಿಸಿದೆ ಎನ್ನಲಾದ ತೈಲ ಟ್ಯಾಂಕರ್‌ಗಳನ್ನೇ ಅಮೆರಿಕ ಗುರಿಯಾಗಿಸಿಕೊಂಡಿದೆ. ಅಮೆರಿಕದ ಯುದ್ಧನೌಕೆಗಳ ಮೇಲೆ ಇರಾನ್ ಕ್ಷಿಪಣಿ ದಾಳಿ ನಡೆಸಲು ವಿಫಲ ಯತ್ನ ನಡೆಸಿದ ಬಳಿಕ ಈ ಪ್ರತಿಕ್ರಿಯಾತ್ಮಕ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಅಮೆರಿಕ ಹೇಳಿಕೊಂಡಿದೆ.

ಖಾರ್ಗ್ ದ್ವೀಪದ ಕರಾವಳಿಯಲ್ಲಿ M/T Downy ಹಾಗೂ ಜಾಸ್ಕ್ ಸಮೀಪ M/T Stark 1 ಹೆಸರಿನ ಕಚ್ಚಾ ತೈಲ ಸಾಗಣೆ ಹಡಗುಗಳನ್ನು ಕಾರ್ಯನಿರ್ವಹಿಸಲು ಸಾಧ್ಯವಾಗದಂತೆ ನಿಷ್ಕ್ರಿಯಗೊಳಿಸಲಾಗಿದೆ 2ನೇ ಪುಟಕ್ಕೆ

## ನಕಲಿ ಮದ್ಯ ಸೇವನೆಗೆ 12 ಮಂದಿ ಬಲಿ: ಹಲವರು ಆಸ್ಪತ್ರೆಗೆ ದಾಖಲು

ಸಾಗರ(ಮಧ್ಯಪ್ರದೇಶ): ಮಧ್ಯಪ್ರದೇಶದ ಸಾಗರ ಜಿಲ್ಲೆಯಲ್ಲಿ ನಕಲಿ ಮದ್ಯ ಸೇವಿಸಿದ ಪರಿಣಾಮ ಕನಿಷ್ಠ 12 ಮಂದಿ ಮೃತಪಟ್ಟಿದ್ದು, ಹತ್ತಕ್ಕೂ ಹೆಚ್ಚು ಮಂದಿ ತೀವ್ರ ಅಸ್ವಸ್ಥರಾಗಿ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಘಟನೆ ಆತಂಕ ಮೂಡಿಸಿದೆ.

ಶನಿವಾರ ರಾತ್ರಿ ಮದ್ಯ ಸೇವಿಸಿದ್ದ ಗ್ರಾಮಸ್ಥರಲ್ಲಿ ಭಾನುವಾರ ಮುಂಜಾನೆ ತೀವ್ರ ತಲೆನೋವು, ವಾಂತಿ, ಕಣ್ಣು ಮಂಜಾಗುವುದು ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳು ಕಾಣಿಸಿಕೊಂಡಿವೆ. ಸ್ಥಿತಿ ಗಂಭೀರವಾಗುತ್ತಿದ್ದಂತೆ ಕುಟುಂಬಸ್ಥರು ಅವರನ್ನು ಬುಂದೇಲ್‌ಖಂಡ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ ಚಿಕಿತ್ಸೆ ಫಲಕಾರಿಯಾಗದೆ 12 ಮಂದಿ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಸಾಗರ ಜಿಲ್ಲಾ ಕೇಂದ್ರದಿಂದ ಸುಮಾರು 30 ಕಿ.ಮೀ ದೂರದಲ್ಲಿರುವ ಬಂದಾ ತೆಹಸಲ್ ವ್ಯಾಪ್ತಿಯ ಬರಾಜ್, ಫೂರ್ಘ, ನಾವ್‌ರಾಜ್ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಈ ಘಟನೆ ಸಂಭವಿಸಿದೆ. ಒಂದೇ ಭಾಗದ ಹಲವರು ಅಸ್ವಸ್ಥರಾಗಿರುವುದರಿಂದ



ಗ್ರಾಮಗಳಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ.

ಚಿಕಿತ್ಸೆ ನೀಡುತ್ತಿರುವ ವೈದ್ಯರ ಪ್ರಕಾರ, ಕೆಲವು ಸಂತ್ರಸ್ತರ ದೇಹದಲ್ಲಿ ಸೈನೋಸಿಸ್, ಅಂದರೆ ದೇಹ ಮತ್ತು ಚರ್ಮ ನೀಲಿ ಬಣ್ಣಕ್ಕೆ ತಿರುಗುವ ಲಕ್ಷಣಗಳು ಹಾಗೂ ಸ್ನಾಯು ಬಿಗಿತ ಕಂಡುಬಂದಿವೆ. ಮದ್ಯದಲ್ಲಿ ಅತ್ಯಂತ ವಿಷಪೂರಿತ ಮಿಥೈಲ್ ಆಲ್ಕೋಹಾಲ್ ಮಿಶ್ರಣವಾಗಿರುವ ಸಾಧ್ಯತೆ ಇದೆ ಎಂಬ ಬಲವಾದ ಶಂಕೆಯನ್ನು ಮುಖ್ಯ ವೈದ್ಯಕೀಯ ಅಧಿಕಾರಿ ವ್ಯಕ್ತಪಡಿಸಿದ್ದಾರೆ.

ಮಿಥೈಲ್ ಆಲ್ಕೋಹಾಲ್ ಸೇವನೆಯಿಂದ ದೇಹದ ಮೇಲೆ ಗಂಭೀರ ಪರಿಣಾಮ ಉಂಟಾಗಬಹುದಾಗಿದ್ದು, ಕಣ್ಣು ಮಂಜಾಗುವುದು, ನರಮಂಡಲದ ಮೇಲೆ ದುಷ್ಪರಿಣಾಮ, ಉಸಿರಾಟದ ತೊಂದರೆ ಹಾಗೂ ಜೀವಕ್ಕೆ ಅಪಾಯ ಉಂಟಾಗುವ ಸಾಧ್ಯತೆಯೂ ಇದೆ. ಈ ಹಿನ್ನೆಲೆಯಲ್ಲಿ ಅಸ್ವಸ್ಥರಿಗೆ ತೀವ್ರ ನಿಗಾದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎನ್ನಲಾಗಿದೆ. 2ನೇ ಪುಟಕ್ಕೆ

## ಫೋನ್ ಕರೆಗಾಗಿ ರಸ್ತೆ ಬದಿ ಬೈಕ್ ನಿಲ್ಲಿಸಿದ್ದಕ್ಕೆ: 3 ವರ್ಷದ ಮಗು ಸೇರಿ ಮೂವರು ಸಾವು

ತ್ರಿಶೂರ್: ಫೋನ್ ಕರೆ ಸ್ವೀಕರಿಸಲು ರಸ್ತೆ ಬದಿಯಲ್ಲಿ ಬೈಕ್ ನಿಲ್ಲಿಸಿದ್ದ ಕುಟುಂಬಕ್ಕೆ ಅತಿವೇಗವಾಗಿ ಬಂದ ಕಾರೊಂದು ಡಿಕ್ಕಿ ಹೊಡೆದ ಪರಿಣಾಮ, ಮೂರು ವರ್ಷದ ಬಾಲಕ ಸೇರಿದಂತೆ ಒಂದೇ ಕುಟುಂಬದ ಮೂವರು ಮೃತಪಟ್ಟಿರುವ ದಾರುಣ ಘಟನೆ ಕೇರಳದ ತ್ರಿಶೂರ್‌ನಲ್ಲಿ ನಡೆದಿದೆ.

ಮೃತರನ್ನು ಚಾವಕ್ಕಾಡ್‌ನ ಎಡಕ್ಕಳಿಯೂರು ನಿವಾಸಿಗಳಾದ ಮುನೀರ್ (35), ಅವರ ಪತ್ನಿ ಸಫ್ನಾ (25) ಹಾಗೂ ದಂಪತಿಯ ಪುತ್ರ ಯಾಮಿಲ್ ಐಬಕ್ (3) ಎಂದು ಗುರುತಿಸಲಾಗಿದೆ.

ಶನಿವಾರ ಮಧ್ಯರಾತ್ರಿಗೂ ಮುನ್ನ ಗುರುವಾಯೂರು-ಕುನ್ನಂಕುಳಂ ರಸ್ತೆಯಲ್ಲಿ ಈ ಭೀಕರ ಅಪಘಾತ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕುಟುಂಬದ ಮೂವರು ಮದುವೆ ಸಮಾರಂಭವೊಂದರಲ್ಲಿ ಭಾಗವಹಿಸಿ ಬೈಕ್‌ನಲ್ಲಿ ಮನೆಗೆ ಹಿಂದಿರುಗುತ್ತಿದ್ದರು. ಈ ವೇಳೆ ಫೋನ್ ಕರೆ ಬಂದಿದ್ದರಿಂದ ಮುನೀರ್ ರಸ್ತೆ



ಬದಿಯಲ್ಲಿ ಬೈಕ್ ನಿಲ್ಲಿಸಿದ್ದರು ಎನ್ನಲಾಗಿದೆ.

ಅದೇ ಸಂದರ್ಭದಲ್ಲಿ ವೇಗವಾಗಿ ಬಂದ ಕಾರು ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯಲ್ಲಿ ನಿಂತಿದ್ದ ಬೈಕ್‌ಗೆ ಭಾರೀ ರಭಸದಿಂದ ಡಿಕ್ಕಿ ಹೊಡೆದಿದೆ. ಡಿಕ್ಕಿಯ ತೀವ್ರತೆಗೆ ಮುನೀರ್, ಸಫ್ನಾ ಹಾಗೂ ಮೂರು ವರ್ಷದ ಯಾಮಿಲ್ ಐಬಕ್ ಸುಮಾರು 50 ಮೀಟರ್ ದೂರಕ್ಕೆ ಎಸೆಯಲ್ಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಅಪಘಾತದಲ್ಲಿ ಮೂವರಿಗೂ ಗಂಭೀರ ಗಾಯಗಳಾಗಿದ್ದು, ಘಟನೆ ಗಮನಿಸಿದ ಸ್ಥಳೀಯರು ಹಾಗೂ ಇತರ ವಾಹನ ಸವಾರರು ಕೂಡಲೇ ನೆರವಿಗೆ ಧಾವಿಸಿದ್ದಾರೆ. ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ಸಾಗಿಸಿ ಚಿಕಿತ್ಸೆ ಕೊಡಿಸಲಾಯಿತು. 2ನೇ ಪುಟಕ್ಕೆ

## ಅಶ್ವಿನಿ ಸಾವಿನ ಪ್ರಕರಣದ ಆರೋಪಿಗಳಿಗೆ ಕಠಿಣ ಶಿಕ್ಷೆ ನೀಡಿ: ಡಾ. ಪೂಜಾ ರಮೇಶ್ ಒತ್ತಾಯ

ರಾಯಚೂರು, ಸೆ.6: ಅಶ್ವಿನಿ ಸಾವಿಗೆ ಕಾರಣರಾದ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಿ, ಅಶ್ವಿನಿ ಕುಟುಂಬಕ್ಕೆ ನ್ಯಾಯ ದೊರಕಿಸಬೇಕು. ಕುಟುಂಬದ ಸದಸ್ಯರಿಗೆ ಸೂಕ್ತ ಭದ್ರತೆ ಒದಗಿಸುವುದರ ಜೊತೆಗೆ ಕುಟುಂಬದ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡಬೇಕು ಎಂದು ಚಿತ್ರನಟಿ, ಸಮಾಜ ಸೇವಕಿ ಹಾಗೂ ಹೋರಾಟಗಾರ್ತಿ ಡಾ. ಪೂಜಾ ರಮೇಶ್ ಒತ್ತಾಯಿಸಿದರು.

ನಗರದ ಟಿಪ್ಪು ಸುಲ್ತಾನ್ ಉದ್ಯಾನವನದಲ್ಲಿ ಫಾತಿಮಾ ಹುಸೇನ್ ಫೌಂಡೇಶನ್, ವಸಂತ ಲಕ್ಷ್ಮಿ ಫೌಂಡೇಶನ್, ದಲಿತ ಸೇನೆ ಹಾಗೂ ವಿವಿಧ ಕನ್ನಡಪರ ಸಂಘಟನೆಗಳ ವತಿಯಿಂದ ಹಮ್ಮಿಕೊಂಡಿದ್ದ ಅಶ್ವಿನಿ ಸಾವಿಗೆ ನ್ಯಾಯ ಬೇಕು ಪ್ರತಿಭಟನೆಯಲ್ಲಿ




ಭಾಗವಹಿಸಿ ಅವರು ಮಾತನಾಡಿದರು.

ಅಶ್ವಿನಿ ಸಾವಿನ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ಪ್ರಕರಣದ ತನಿಖೆಯನ್ನು ಪಾರದರ್ಶಕವಾಗಿ ನಡೆಸಬೇಕು. ತಪ್ಪಿತಸ್ಥರು ಯಾರೇ ಆಗಿದ್ದರೂ ಕಾನೂನಿನಡಿ ಕಠಿಣ ಶಿಕ್ಷೆಗೆ ಒಳಪಡಿಸಬೇಕು. ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಕಠಿಣ ಸಂದೇಶ ನೀಡಬೇಕಾಗಿದೆ ಎಂದು ಹೇಳಿದರು.

ಉತ್ತರ ಭಾರತದ ವಿವಿಧ ಭಾಗಗಳಲ್ಲಿ ಮಹಿಳೆಯರ ಮೇಲಿನ ಅತ್ಯಾಚಾರ, ಹಲ್ಲೆ ಮತ್ತು ಕೊಲೆಗಳಂತಹ ಘಟನೆಗಳ ಬಗ್ಗೆ ಕೇಳುತ್ತಿದ್ದೆವು. ಆದರೆ ಈಗ ನಮ್ಮ ಸುತ್ತಮುತ್ತಲಿನ ಪ್ರದೇಶಗಳಲ್ಲಿಯೂ ಇಂತಹ ಘಟನೆಗಳು ನಡೆಯುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. 2ನೇ ಪುಟಕ್ಕೆ

## ಮಕ್ಕಳಲ್ಲಿ ಸಂಸ್ಕಾರ, ನೈತಿಕ ಮೌಲ್ಯ ಬೆಳೆಸಲು ಸೆ.12-13ರಂದು ಬುದ್ಧಪ್ರಜ್ಞಾ ಮಕ್ಕಳ ಮೈತ್ರಿ ಕಾರ್ಯಕ್ರಮ

ರಾಯಚೂರು: ಮಕ್ಕಳಲ್ಲಿ ಉತ್ತಮ ಸಂಸ್ಕಾರ, ನೈತಿಕ ಮೌಲ್ಯಗಳು ಹಾಗೂ ಮಹಾನ್ ದಾರ್ಶನಿಕರ ಆದರ್ಶಗಳನ್ನು ಬೆಳೆಸುವ ಉದ್ದೇಶದಿಂದ ಸೆಪ್ಟೆಂಬರ್ 12 ಮತ್ತು 13ರಂದು ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಬುದ್ಧಪ್ರಜ್ಞಾ ಮಕ್ಕಳ ಮೈತ್ರಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ದಮ್ಮ ದೀಪ ಬಂತೇಜಿ ತಿಳಿಸಿದರು.

ನಗರದ ಸರ್ಕಾರಿ ನೌಕರರ ಭವನದ ಮನರಂಜನಾ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇಂದಿನ ಸಾಮಾಜಿಕ ಪರಿಸ್ಥಿತಿಯಲ್ಲಿ ಮಕ್ಕಳು ಹಲವು ರೀತಿಯ ದುಷ್ಪರಿಣಾಮಗಳಿಗೆ ಒಳಗಾಗುತ್ತಿರುವುದು ಆತಂಕಕಾರಿ




ಬೆಳವಣಿಗೆಯಾಗಿದೆ. ನಶೆ ಪದಾರ್ಥಗಳ ಆಕರ್ಷಣೆ, ಅತಿಯಾದ ಮೊಬೈಲ್ ಬಳಕೆ, ಮಾನಸಿಕ ಒತ್ತಡ ಹಾಗೂ ವಿವಿಧ ಸಾಮಾಜಿಕ ಸಮಸ್ಯೆಗಳು ಮಕ್ಕಳ ಮೇಲೆ ಪರಿಣಾಮ ಬೀರುತ್ತಿವೆ. ಇಂತಹ ಸಂದರ್ಭದಲ್ಲಿ ಮಕ್ಕಳಿಗೆ ಸೂಕ್ತ ಮಾರ್ಗದರ್ಶನ, ಉತ್ತಮ ಸಂಸ್ಕಾರ ಮತ್ತು ಜೀವನಮೌಲ್ಯಗಳನ್ನು ಪರಿಚಯಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಮಕ್ಕಳ ವ್ಯಕ್ತಿತ್ವ ನಿರ್ಮಾಣದಲ್ಲಿ ಪಾಲಕರ ಪಾತ್ರ ಮಹತ್ವದ್ದಾಗಿದ್ದು, ಕೇವಲ ವಿದ್ಯಾಭ್ಯಾಸಕ್ಕೆ ಸೀಮಿತಗೊಳಿಸದೆ ನೈತಿಕತೆ, ಮಾನವೀಯತೆ, ಶಿಸ್ತು, ಸಹಬಾಳ್ವೆ ಮತ್ತು ಸಾಮಾಜಿಕ ಜವಾಬ್ದಾರಿಯ ಮೌಲ್ಯಗಳನ್ನು ಕಲಿಸಬೇಕು. ಆದರೆ ಹಲವಾರು ಸಂದರ್ಭಗಳಲ್ಲಿ 2ನೇ ಪುಟಕ್ಕೆ

## ಬಹುಮತ ಪಡೆದ ಬಣಕ್ಕೆ ತಾಲೂಕು ಸಮಿತಿ ರಚಿಸಲು ಅವಕಾಶ ನೀಡಿ: ಮಾರುತಿ ಆಗ್ರಹ

ರಾಯಚೂರು, ಸೆ.6: ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಯಚೂರು ತಾಲೂಕು ಘಟಕದ ಚುನಾವಣೆಯಲ್ಲಿ ಬಹುಮತ ಪಡೆದ ಚುನಾಯಿತ ನಿರ್ದೇಶಕರ ಬಣಕ್ಕೆ ತಾಲೂಕು ಸಮಿತಿ ರಚಿಸಲು ಅವಕಾಶ ನೀಡಬೇಕು. ಚುನಾವಣೆಯಲ್ಲಿ ಸೋತ ಅಭ್ಯರ್ಥಿಗಳನ್ನು ಒಳಗೊಂಡ ಅಡಾಕ್ ಸಮಿತಿ ರಚಿಸಿರುವ ಕ್ರಮವನ್ನು ಮರುಪರಿಶೀಲಿಸಬೇಕು ಎಂದು ಸಂಘದ ಚುನಾಯಿತ ನಿರ್ದೇಶಕ ಮಾರುತಿ ಆಗ್ರಹಿಸಿದರು.

ನಗರದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2026-31ನೇ ಸಾಲಿನ ತಾಲೂಕು ಘಟಕದ ಚುನಾವಣೆ ಮೇ 1ರಂದು ನಡೆದಿತ್ತು. ಮತದಾನ ಹಾಗೂ ಮತ ಎಣಿಕೆ ಪ್ರಕ್ರಿಯೆ ಪೂರ್ಣಗೊಂಡಿದ್ದರೂ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಅಂದು ಫಲಿತಾಂಶ ಪ್ರಕಟಿಸಿರಲಿಲ್ಲ. ಬಳಿಕ ಕಲಬುರಗಿ ಹೈಕೋರ್ಟ್ ಆದೇಶದಂತೆ ಜುಲೈ 13ರಂದು ಚುನಾವಣಾ ಫಲಿತಾಂಶವನ್ನು ಅಧಿಕೃತವಾಗಿ ಘೋಷಿಸಲಾಗಿದ್ದು, ವಿಜೇತ ಅಭ್ಯರ್ಥಿಗಳಿಗೆ ಪ್ರಮಾಣಪತ್ರಗಳನ್ನೂ ವಿತರಿಸಲಾಗಿದೆ



ಎಂದು ತಿಳಿಸಿದರು.

ಚುನಾವಣಾ ಪ್ರಕ್ರಿಯೆ ಪೂರ್ಣಗೊಂಡು ಫಲಿತಾಂಶ ಅಧಿಕೃತವಾಗಿ ಪ್ರಕಟವಾದ ನಂತರ ಬಹುಮತ ಪಡೆದ ಚುನಾಯಿತ ನಿರ್ದೇಶಕರಿಗೆ ತಾಲೂಕು ಸಮಿತಿ ರಚಿಸಲು ಅವಕಾಶ ಕಲ್ಪಿಸಬೇಕಾಗಿತ್ತು. ಈ ಸಂಬಂಧ ರಾಜ್ಯ ಸಂಘ ಹಾಗೂ ಜಿಲ್ಲಾ ಘಟಕದ ಅಧ್ಯಕ್ಷರಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದೇವೆ. ಆದರೂ ಇದುವರೆಗೆ ಸೂಕ್ತ ಸ್ಪಂದನೆ ದೊರೆತಿಲ್ಲ ಎಂದು ದೂರಿದರು.

ಜುಲೈ 23ರಂದು ಅಂಚೆ ಮೂಲಕ ತಾಲೂಕು ಸಮಿತಿ ರಚನೆಗೆ ಅನುಮತಿ ಕೋರಿ ಮನವಿ ಕಳುಹಿಸಲಾಗಿತ್ತು. ಬಳಿಕ ಆಗಸ್ಟ್ 23ರಂದು ಜಿಲ್ಲಾಧ್ಯಕ್ಷರನ್ನು ಖುದ್ದಾಗಿ ಭೇಟಿ ಮಾಡಿ ಮನವಿ ಸಲ್ಲಿಸಿ, ಚುನಾವಣೆಯಲ್ಲಿ ಬಹುಮತ ಪಡೆದ ನಿರ್ದೇಶಕರಿಗೆ ಸಂಘದ ಆಡಳಿತ ನಡೆಸಲು ಅವಕಾಶ ನೀಡುವಂತೆ ಕೋರಲಾಗಿತ್ತು. ಆದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಈ ಸಮಸ್ಯೆಯನ್ನು ಬಗೆಹರಿಸಿಕೊಳ್ಳುವ ಉದ್ದೇಶದಿಂದ ಇತ್ತೀಚೆಗೆ ಬೆಂಗಳೂರಿಗೆ ತೆರಳಿ ರಾಜ್ಯ ಸಂಘದ ಅಧ್ಯಕ್ಷರನ್ನೂ ಭೇಟಿ ಮಾಡಲಾಗಿದೆ. ತಾಲೂಕು ಸಮಿತಿ ರಚನೆಗೆ ಸಂಬಂಧಿಸಿದಂತೆ ಮನವಿ ಸಲ್ಲಿಸಿದಾಗ, ಜಿಲ್ಲಾಧ್ಯಕ್ಷರೊಂದಿಗೆ ಚರ್ಚಿಸಿ ಅಗತ್ಯ ಪತ್ರ ಪಡೆದುಕೊಳ್ಳುವಂತೆ ಸೂಚಿಸಿದ್ದರು. ಆದರೆ ಆ ಸೂಚನೆಯ ನಂತರವೂ ಜಿಲ್ಲಾಧ್ಯಕ್ಷರಿಂದ ನಿರೀಕ್ಷಿತ ಸ್ಪಂದನೆ ಸಿಕ್ಕಿಲ್ಲ ಎಂದು ಹೇಳಿದರು.

ಚುನಾವಣೆಯಲ್ಲಿ ಬಹುಮತ ಪಡೆದ 11 ಮಂದಿ ಚುನಾಯಿತ ನಿರ್ದೇಶಕರು ಸೆ.3ರಂದು ಸಭೆ ನಡೆಸಿ, ಅಧ್ಯಕ್ಷ, ಉಪಾಧ್ಯಕ್ಷ, ಕಾರ್ಯದರ್ಶಿ ಸೇರಿದಂತೆ 2ನೇ ಪುಟಕ್ಕೆ

## ಕರ್ನಾಟಕ ಸೇನೆ ರಾಯಚೂರು ಜಿಲ್ಲಾ ಘಟಕಕ್ಕೆ ಪದಾಧಿಕಾರಿಗಳ ನೇಮಕ: ಸಂಘಟನೆ ಬಲವರ್ಧನೆಗೆ ಒತ್ತು

ರಾಯಚೂರು: ಕರ್ನಾಟಕ ಸೇನೆ ರಾಯಚೂರು ಜಿಲ್ಲಾ ಘಟಕದ ವತಿಯಿಂದ ಜಿಲ್ಲೆಯ ವಿವಿಧ ಪದಾಧಿಕಾರಿಗಳ ನೇಮಕ ಹಾಗೂ ತಾಲೂಕು ಅಧ್ಯಕ್ಷರ ಸಭೆಯನ್ನು ಭಾನುವಾರ ನಗರದ ಸರ್ಕಾರಿ ನೌಕರರ ಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕರ್ನಾಟಕ ಸೇನೆಯ ರಾಜ್ಯಾಧ್ಯಕ್ಷ ಬಸವರಾಜ ಎಂ. ಪಡುಕೋಟೆ ಹಾಗೂ ರಾಯಚೂರು ಜಿಲ್ಲಾಧ್ಯಕ್ಷ ಕೆ. ಕೊಂಡಪ್ಪ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಜಿಲ್ಲೆಯಾದ್ಯಂತ ಸಂಘಟನೆಯನ್ನು ಇನ್ನಷ್ಟು ಬಲಪಡಿಸುವುದು, ತಾಲೂಕು ಘಟಕಗಳ ಕಾರ್ಯಚಟುವಟಿಕೆಗಳಿಗೆ ವೇಗ ನೀಡುವುದು ಹಾಗೂ ಸಂಘಟನೆಯ ಉದ್ದೇಶಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಕುರಿತು ಸುದೀರ್ಘವಾಗಿ ಚರ್ಚಿಸಲಾಯಿತು.

ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಸಂಘಟನೆಯ ಕಾರ್ಯವ್ಯಾಪ್ತಿಯನ್ನು ವಿಸ್ತರಿಸುವ ನಿಟ್ಟಿನಲ್ಲಿ ಹೊಸ ಪದಾಧಿಕಾರಿಗಳನ್ನು ನೇಮಕ ಮಾಡುವ ಕುರಿತು ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಯಿತು. ತಾಲೂಕು ಮಟ್ಟದಲ್ಲಿ ಸಂಘಟನೆಯ ಚಟುವಟಿಕೆಗಳನ್ನು ಚುರುಕುಗೊಳಿಸುವುದರ ಜೊತೆಗೆ ಸ್ಥಳೀಯ ಸಮಸ್ಯೆಗಳಿಗೆ ಸ್ಪಂದಿಸಿ, ಸಾರ್ವಜನಿಕ ಹಿತಾಸಕ್ತಿಯ ವಿಷಯಗಳಲ್ಲಿ ಸಂಘಟನೆ




ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು ಎಂದು ಮುಖಂಡರು ಪದಾಧಿಕಾರಿಗಳಿಗೆ ಸಲಹೆ ನೀಡಿದರು.

ಸಂಘಟನೆಯ ಶಿಸ್ತು, ಏಕತೆ ಹಾಗೂ ಪರಸ್ಪರ ಸಮನ್ವಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಸಂಘಟನೆಯ ಘಟಕಗಳನ್ನು ಮತ್ತಷ್ಟು ಸಕ್ರಿಯಗೊಳಿಸಿ, ಯುವಕರು ಹಾಗೂ ಸಾರ್ವಜನಿಕರನ್ನು ಸಂಘಟನೆಯ ಚಟುವಟಿಕೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಳ್ಳುವಂತೆ ಪ್ರೇರೇಪಿಸಬೇಕು ಎಂಬ ಅಭಿಪ್ರಾಯವೂ ಸಭೆಯಲ್ಲಿ ವ್ಯಕ್ತವಾಯಿತು.

ಇದೇ ಸಂದರ್ಭದಲ್ಲಿ ಹೊಸದಾಗಿ ನೇಮಕಗೊಂಡ ಪದಾಧಿಕಾರಿಗಳಿಗೆ ಸಂಘಟನೆಯ ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸುವಂತೆ ಸೂಚಿಸಲಾಯಿತು. ತಾಲೂಕು ಘಟಕಗಳು ನಿಯಮಿತವಾಗಿ ಸಭೆಗಳನ್ನು ನಡೆಸಿ, ಸ್ಥಳೀಯ ಸಮಸ್ಯೆಗಳ ಕುರಿತು ಜಿಲ್ಲಾ ಘಟಕದ ಗಮನಕ್ಕೆ ತರುವ ಮೂಲಕ ಪರಿಹಾರಕ್ಕೆ ಪ್ರಯತ್ನಿಸಬೇಕು ಎಂದು ಮುಖಂಡರು ಹೇಳಿದರು.

ಸಭೆಯಲ್ಲಿ ವಿಶ್ವರಾಧ್ಯ, ಗಣೇಶ್ ರಾವ್ ಪಾಟೀಲ್, ಶ್ರೀದೇವಿ ಕಟ್ಟಿಮನಿ, ಮುಜಾ ಹುಸೇನ್, ಪ್ರತಾಪರೆಡ್ಡಿ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕುಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಬಹುಮತ ಪಡೆದ ಬಣಕ್ಕೆ ತಾಲೂಕು ಸಮಿತಿ ರಚಿಸಲು ಅವಕಾಶ ನೀಡಿ: ಮಾರುತಿ ಆಗ್ರಹ

ವಿವಿಧ ಪದಾಧಿಕಾರಿಗಳನ್ನು ಆಯ್ಕೆ ಮಾಡಿಕೊಂಡು ತಾಲೂಕು ಸಮಿತಿ ರಚಿಸಿದ್ದಾರೆ. ಈ ಸಮಿತಿಯನ್ನು ಸೆ.7ರಂದು ಅಧಿಕೃತವಾಗಿ ಘೋಷಿಸಲು ನಿರ್ಧರಿಸಲಾಗಿತ್ತು. ಆದರೆ ಇದರ ನಡುವೆಯೇ ಜಿಲ್ಲಾಧ್ಯಕ್ಷರು ವಿರೋಧಿ ಬಣದ ಕೆಲ ಗೆದ್ದ ಅಭ್ಯರ್ಥಿಗಳ ಜೊತೆಗೆ ಚುನಾವಣೆಯಲ್ಲಿ ಸೋತ ಕೆಲ ಅಭ್ಯರ್ಥಿಗಳನ್ನೂ ಸೇರಿಸಿಕೊಂಡು ಅಡಾಕ್ ಸಮಿತಿ ರಚಿಸಿ ಘೋಷಿಸಿರುವುದು ಸರಿಯಲ್ಲ ಎಂದು ಮಾರುತಿ ಆಕ್ಷೇಪ ವ್ಯಕ್ತಪಡಿಸಿದರು.

ಚುನಾವಣೆಯಲ್ಲಿ ಮತದಾರರು ನೀಡಿರುವ ತೀರ್ಪಿಗೆ ಗೌರವ ನೀಡುವುದು ಸಂಘದ ಜವಾಬ್ದಾರಿಯಾಗಿದೆ. ಬಹುಮತ ಪಡೆದ ಚುನಾಯಿತ ಪ್ರತಿನಿಧಿಗಳನ್ನು ಕಡೆಗಣಿಸಿ, ಸೋತ ಅಭ್ಯರ್ಥಿಗಳಿಗೆ ಅಡಾಕ್ ಸಮಿತಿಯಲ್ಲಿ ಸ್ಥಾನ ಕಲ್ಪಿಸುವುದರಿಂದ ಚುನಾವಣಾ ಪ್ರಕ್ರಿಯೆಯ ಉದ್ದೇಶವೇ ಪ್ರಶ್ನಾರ್ಹವಾಗುತ್ತದೆ. ಅಲ್ಲದೆ, ಬಹುಮತದೊಂದಿಗೆ ಆಯ್ಕೆಯಾದ ನಿರ್ದೇಶಕರಿಗೆ ಇದು ಅವಮಾನ ಮಾಡಿದಂತಾಗಿದೆ ಎಂದು ಆರೋಪಿಸಿದರು.

ಸಂಘದಂತಹ ಪ್ರಜಾಸತ್ತಾತ್ಮಕ ಸಂಸ್ಥೆಗಳಲ್ಲಿ ಚುನಾಯಿತ ಪ್ರತಿನಿಧಿಗಳಿಗೆ ಆದ್ಯತೆ ನೀಡಬೇಕು. ಚುನಾವಣೆ ನಡೆಸಿ ಫಲಿತಾಂಶ ಪ್ರಕಟಿಸಿದ ಬಳಿಕ ಸದಸ್ಯರು ನೀಡಿದ ಜನಾದೇಶದಂತೆ ಆಡಳಿತ ಮಂಡಳಿ ರಚನೆಗೆ ಅವಕಾಶ ನೀಡಬೇಕು. ಅದನ್ನು ಬಿಟ್ಟು ಅಡಾಕ್ ಸಮಿತಿ ರಚಿಸಿರುವ ಕ್ರಮ ಪ್ರಜಾಸತ್ತಾತ್ಮಕ ಹಾಗೂ ಸಂವಿಧಾನಾತ್ಮಕ ಪ್ರಕ್ರಿಯೆಗೆ ವಿರುದ್ಧವಾಗಿದೆ ಎಂದು ಅವರು ಪ್ರತಿಪಾದಿಸಿದರು.

ಈ ವಿಷಯದಲ್ಲಿ ಯಾವುದೇ ವೈಯಕ್ತಿಕ ಭಿನ್ನಾಭಿಪ್ರಾಯ ಅಥವಾ ಸಂಘರ್ಷಕ್ಕೆ ಅವಕಾಶ ನೀಡದೆ, ರಾಜ್ಯ ಮತ್ತು ಜಿಲ್ಲಾ ಸಂಘದ ಪದಾಧಿಕಾರಿಗಳು ವಾಸ್ತವಾಂಶ ಹಾಗೂ ಚುನಾವಣಾ ಫಲಿತಾಂಶವನ್ನು ಪರಿಗಣಿಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು. ಬಹುಮತ ಪಡೆದ ಚುನಾಯಿತ ನಿರ್ದೇಶಕರ ಬಣಕ್ಕೆ ತಾಲೂಕು ಸಮಿತಿ ರಚಿಸಿ ಸಂಘದ ಕಾರ್ಯಚಟುವಟಿಕೆಗಳನ್ನು ಮುಂದುವರಿಸಲು ಅವಕಾಶ ಕಲ್ಪಿಸಬೇಕು ಎಂದು ಮಾರುತಿ ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ನಿರ್ದೇಶಕರಾದ ವೀರೇಶ್ ಟಿ., ಭೀಮ ನಾಯಕ್, ಮಾರೆಪ್ಪ, ಗೀತಾ ರಾಣಿ, ಧನಲಕ್ಷ್ಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹೊಸಪೇಟೆಯಿಂದ ಮನ್ಸಲಾಪುರಕ್ಕೆ ಧರ್ಮ ಜಾಗೃತಿ ಪಾದಯಾತ್ರೆ





ರಾಯಚೂರು: ಶ್ರಾವಣ ಮಾಸದ ಅಂಗವಾಗಿ ತಾಲೂಕಿನ ಹೊಸಪೇಟೆ ಕೆಂಪಿನ ಮಠದ ಶ್ರೀ ಸಿದ್ಧಲಿಂಗ ಸ್ವಾಮೀಜಿ ನೇತೃತ್ವದಲ್ಲಿ ರವಿವಾರ ಮನ್ಸಲಾಪುರದ ಶ್ರೀ ಸಿದ್ಧಲಿಂಗೇಶ್ವರ ದೇವಸ್ಥಾನವರೆಗೆ ಧರ್ಮ ಜಾಗೃತಿ ಪಾದಯಾತ್ರೆ ಭಕ್ತಿಪೂರ್ವಕವಾಗಿ ನಡೆಯಿತು.

ಶಿವಭಜನೆ, ಡೊಳ್ಳು ಕುಣಿತ ಹಾಗೂ ವಿವಿಧ ವಾದ್ಯಗಳೊಂದಿಗೆ ಭಕ್ತರು ಪಾದಯಾತ್ರೆಯಲ್ಲಿ ಪಾಲ್ಗೊಂಡರು. ದೇವಸ್ಥಾನದಲ್ಲಿ ವಿಶೇಷ ಪೂಜೆ ಬಳಿಕ ನಡೆದ ಧರ್ಮಸಭೆಯಲ್ಲಿ ನೆರಡಗಂ ಪಶ್ಚಿಮಾದ್ರಿ ಸಂಸ್ಥಾನ ಮಠದ ಶ್ರೀ ಪಂಚಮ ಸಿದ್ಧಲಿಂಗ ಸ್ವಾಮೀಜಿ, ಅಡವಿ ಅಮರೇಶ್ವರ ಮಠದ ಶ್ರೀ ತೊಂಟಾದರ್ಯ ಸ್ವಾಮೀಜಿ ಹಾಗೂ ಕೆಂಪಿನ ಮಠದ ಶ್ರೀ ಸಿದ್ಧಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ಮಳೆ-ಬೆಳೆ ಸಮೃದ್ಧಿಯಾಗಲಿ ಎಂದು ಪ್ರಾರ್ಥಿಸಿದರು.

## ಅಮೃತ ವಾಣಿ

ಇತರರಿಂದ ನಾವು ಅವಮಾನಕ್ಕೊಳಗಾದರೆ, ಅದನ್ನು ಯಶಸ್ಸಿನ ಕಡೆಗೆ ಕೊಂಡೊಯ್ಯಬೇಕು.

## 1578ನೇಯ ದಿನಕ್ಕೆ ಏಮ್ಸ್ ಹೋರಾಟ

# ಫೋನ್ ಕರೆಗಾಗಿ ರಸ್ತೆ ಬದಿ ಬೈಕ್ ನಿಲ್ಲಿಸಿದ್ದಕ್ಕೆ: 3 ವರ್ಷದ ಮಗು ಸೇರಿ ಮೂವರು ಸಾವು

ಆದರೆ ಗಂಭೀರ ಗಾಯಗೊಂಡಿದ್ದ ಮೂವರನ್ನೂ ಉಳಿಸಲು ಸಾಧ್ಯವಾಗದೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.

ಒಂದೇ ಕುಟುಂಬದ ಮೂವರು, ಅದರಲ್ಲೂ ಮೂರು ವರ್ಷದ ಬಾಲಕ ಸೇರಿದಂತೆ ದಂಪತಿ ಮೃತಪಟ್ಟಿರುವುದು ಕುಟುಂಬಸ್ಥರು ಹಾಗೂ ಸ್ಥಳೀಯರಲ್ಲಿ ಆಘಾತ ಮತ್ತು ಶೋಕವನ್ನುಂಟು ಮಾಡಿದೆ.

ಅಪಘಾತಕ್ಕೆ ಕಾರಣವಾದ ಕಾರಿನ ಚಾಲಕ ಕುನ್ನಂಕುಳಂನ ಬಾರ್‌ವೊಂದರಿಂದ ಹಿಂದಿರುಗುತ್ತಿದ್ದ ಎನ್ನಲಾಗಿದೆ. ಅಪಘಾತ ಸಂಭವಿಸಿದ ಬಳಿಕ ಕಾರು ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಚಾಲಕನ ಪತ್ತೆಗಾಗಿ ಪೊಲೀಸರು ಶೋಧ ಕಾರ್ಯ ಕೈಗೊಂಡಿದ್ದಾರೆ.

ಅಪಘಾತದ ವೇಳೆ ಕಾರಿನಲ್ಲಿ ಇನ್ನಿಬ್ಬರು ಪ್ರಯಾಣಿಕರು ಇದ್ದರು ಎನ್ನಲಾಗಿದ್ದು, ಅವರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಅಪಘಾತ ಹೇಗೆ ಸಂಭವಿಸಿತು, ಕಾರು ಎಷ್ಟು ವೇಗದಲ್ಲಿತ್ತು ಹಾಗೂ ಚಾಲಕನಿಗೆ ಸಂಬಂಧಿಸಿದ ಇತರ ವಿವರಗಳ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಈ ದುರಂತಕ್ಕೂ ಒಂದು ದಿನ ಮುನ್ನ ತ್ರಿಶೂರ್‌ನಲ್ಲಿ ಮತ್ತೊಂದು ಭೀಕರ ರಸ್ತೆ ಅಪಘಾತ ಸಂಭವಿಸಿತ್ತು. ತಮಿಳುನಾಡಿನ ಎಂಟು ಎಂಜಿನಿಯರಿಂಗ್ ವಿದ್ಯಾರ್ಥಿಗಳು ಪ್ರಯಾಣಿಸುತ್ತಿದ್ದ ಕಾರು ಶುಕ್ರವಾರ ರಾತ್ರಿ ರಾಷ್ಟ್ರೀಯ ಹೆದ್ದಾರಿ-66ರಲ್ಲಿ ನಿಂತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಅವರು ಮೃತಪಟ್ಟಿದ್ದರು.

ಸತತವಾಗಿ ಸಂಭವಿಸಿರುವ ಭೀಕರ ರಸ್ತೆ ಅಪಘಾತಗಳು ತ್ರಿಶೂರ್ ಭಾಗದಲ್ಲಿ ಆತಂಕಕ್ಕೆ ಕಾರಣವಾಗಿದ್ದು, ರಸ್ತೆ ಸುರಕ್ಷತೆ ಹಾಗೂ ಅತಿವೇಗದ ವಾಹನ ಚಾಲನೆ ಕುರಿತು ಮತ್ತೊಮ್ಮೆ ಗಂಭೀರ ಚರ್ಚೆಗೆ ಕಾರಣವಾಗಿವೆ.

# ಅಶ್ವಿನಿ ಸಾವಿನ ಪ್ರಕರಣದ ಆರೋಪಿಗಳಿಗೆ ಕಠಿಣ ಶಿಕ್ಷೆ ನೀಡಿ: ಡಾ. ಪೂಜಾ ರಮೇಶ್ ಒತ್ತಾಯ

ಮಹಿಳೆಯರು ಮನೆಯೊಳಗೆ ಮಾತ್ರವಲ್ಲ, ಕೆಲಸದ ಸ್ಥಳ, ಸಾರ್ವಜನಿಕ ಸ್ಥಳ ಸೇರಿದಂತೆ ಎಲ್ಲೆಡೆ ಸುರಕ್ಷಿತವಾಗಿರುವ ವಾತಾವರಣ ನಿರ್ಮಾಣವಾಗಬೇಕು ಎಂದು ತಿಳಿಸಿದರು.

ದೇಶಕ್ಕೆ ಸ್ವಾತಂತ್ರ್ಯ ದೊರೆತು ಹಲವು ದಶಕಗಳು ಕಳೆದಿದ್ದರೂ ಮಹಿಳೆಯರು ನಿರ್ಭಯವಾಗಿ ಬದುಕುವಂತಹ ಪರಿಸ್ಥಿತಿ ಇನ್ನೂ ಸಂಪೂರ್ಣವಾಗಿ ನಿರ್ಮಾಣವಾಗಿಲ್ಲ ಎಂಬುದು ವಿಷಾದಕರ. ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ವಿಳಂಬವಿಲ್ಲದೆ ಕ್ರಮ ಕೈಗೊಂಡು, ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ಸಿಗುವಂತೆ ಸರ್ಕಾರ ಹಾಗೂ ಪೊಲೀಸ್ ಇಲಾಖೆ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಆಗ್ರಹಿಸಿದರು.

ಅಶ್ವಿನಿ ಕುಟುಂಬವು ಈಗಾಗಲೇ ದುಃಖದ ಸ್ಥಿತಿಯಲ್ಲಿದೆ. ಇಂತಹ ಸಂದರ್ಭದಲ್ಲಿ ಕುಟುಂಬದ ಸದಸ್ಯರಿಗೆ ಭಯಮುಕ್ತ ವಾತಾವರಣ ಕಲ್ಪಿಸುವುದು ಸರ್ಕಾರದ ಕರ್ತವ್ಯವಾಗಿದೆ. ಕುಟುಂಬಕ್ಕೆ ಅಗತ್ಯ ರಕ್ಷಣೆ, ಪರಿಹಾರ ಹಾಗೂ ಒಬ್ಬ ಸದಸ್ಯರಿಗೆ ಸರ್ಕಾರಿ ನೌಕರಿ ನೀಡುವ ಮೂಲಕ ಅವರ ಜೀವನಕ್ಕೆ ಆಸರೆಯಾಗಬೇಕು ಎಂದು ಡಾ. ಪೂಜಾ ರಮೇಶ್ ಹೇಳಿದರು.

ಮಹಿಳೆಯರ ಮೇಲಿನ ದೌರ್ಜನ್ಯ ಕೇವಲ ಒಂದು ಕುಟುಂಬದ ಸಮಸ್ಯೆಯಲ್ಲ, ಅದು ಇಡೀ ಸಮಾಜ ತಲೆತಗ್ಗಿಸುವಂತಹ ವಿಚಾರವಾಗಿದೆ. ಮಹಿಳೆಯರನ್ನು ಗೌರವಿಸುವ ಮತ್ತು ಅವರ ಹಕ್ಕುಗಳನ್ನು ಕಾಪಾಡುವ ಮನೋಭಾವವನ್ನು ಬಾಲ್ಯದಿಂದಲೇ ಬೆಳೆಸಬೇಕಿದೆ. ಕಾನೂನುಗಳ ಕಟ್ಟುನಿಟ್ಟಿನ ಅನುಷ್ಠಾನದ ಜೊತೆಗೆ ಸಾಮಾಜಿಕ ಜಾಗೃತಿಗೂ ಹೆಚ್ಚಿನ ಮಹತ್ವ ನೀಡಬೇಕು ಎಂದು ಹೇಳಿದರು.

ಕನ್ನಡದ ಖ್ಯಾತ ಚಿತ್ರನಟ ಹಾಗೂ ಸಂಗೀತ ನಿರ್ದೇಶಕ ವಿ. ಮನೋಹರ್ ಮಾತನಾಡಿ, ಮಹಿಳೆಯನ್ನು ಗೌರವಿಸುವುದು ನಮ್ಮ ಸಂಸ್ಕೃತಿಯ ಮೂಲಭೂತ ಮೌಲ್ಯವಾಗಿದೆ. ಮಹಿಳೆಯರಿಗೆ ಗೌರವ ನೀಡುವ ಈ ನೆಲದಲ್ಲಿ ಅವರ ಮೇಲೆ ಅತ್ಯಾಚಾರ, ಹಲ್ಲೆ ಮತ್ತು ಕೊಲೆಗಳಂತಹ ಘಟನೆಗಳು ನಡೆಯುತ್ತಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಮಹಿಳೆಯರ ಸುರಕ್ಷತೆ ಕೇವಲ ಸರ್ಕಾರ ಅಥವಾ ಪೊಲೀಸ್ ಇಲಾಖೆಯ ಹೊಣೆಗಾರಿಕೆಯಾಗಿ ಉಳಿಯಬಾರದು. ಪ್ರತಿಯೊಬ್ಬ ನಾಗರಿಕನೂ ಮಹಿಳೆಯರ ಗೌರವ ಮತ್ತು ಸುರಕ್ಷತೆಯನ್ನು ಕಾಪಾಡುವ ಜವಾಬ್ದಾರಿ ಹೊಂದಿರಬೇಕು. ಸಮಾಜದಲ್ಲಿ ಮಹಿಳೆಯರನ್ನು ಸಮಾನತೆಯಿಂದ ನೋಡುವ ಮನೋಭಾವ ಇನ್ನಷ್ಟು ಗಟ್ಟಿಯಾಗಬೇಕು. ಇಂತಹ ಪ್ರಕರಣಗಳಲ್ಲಿ ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ದೊರೆಯುವವರೆಗೂ ಸಮಾಜ ಸಂಘಟಿತವಾಗಿ ಧ್ವನಿ ಎತ್ತಬೇಕು ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ವಿವಿಧ ಸಂಘಟನೆಗಳ ಮುಖಂಡರು ಅಶ್ವಿನಿ ಸಾವಿನ ಪ್ರಕರಣದ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು, ಕುಟುಂಬಕ್ಕೆ ನ್ಯಾಯ ಮತ್ತು ರಕ್ಷಣೆ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ವಸಂತ ಲಕ್ಷ್ಮಿ ಫೌಂಡೇಶನ್ ಅಧ್ಯಕ್ಷೆ ಡಾ. ಪೂಜಾ ರಮೇಶ್, ಫಾತಿಮಾ ಹುಸೇನ್ ಫೌಂಡೇಶನ್ ಅಧ್ಯಕ್ಷೆ ಡಾ. ಫಾತಿಮಾ ಹುಸೇನ್, ಹೋರಾಟಗಾರ ಮಾರುತಿ ಬಡಿಗೇರ್, ದಲಿತ ಸೇನೆ ಮುಖಂಡರಾದ ಜಾವೀದ್ ಖಾನ್ ಮಾನ್ವಿ, ಆಲಂ ಗಣಿ, ಶಾಲಂ, ಚಿರಂಜೀವಿ ಯಾದವ್, ವೀರೇಶ್ ಮ್ಯಾದರ್, ತಿಮ್ಮಪ್ಪ ಪೋತಗಲ್, ತಾಯಪ್ಪ, ಇಂದಿರಾ, ಭಾರತಿ ಹಿರೇಮಠ, ಬಡೆಸಾಬ, ಅಂಜಲಿ ರಾಮ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಕ್ಕಳಲ್ಲಿ ಸಂಸ್ಕಾರ, ನೈತಿಕ ಮೌಲ್ಯ ಬೆಳೆಸಲು ಸೆ.12-13ರಂದು ಬುದ್ಧಪ್ರಜ್ಞಾ ಮಕ್ಕಳ ಮೈತ್ರಿ ಕಾರ್ಯಕ್ರಮ

ಇಂತಹ ಮೌಲ್ಯಗಳನ್ನು ಮಕ್ಕಳಿಗೆ ಸಮರ್ಪಕವಾಗಿ ತಲುಪಿಸುವಲ್ಲಿ ಕುಟುಂಬ ಹಾಗೂ ಸಮಾಜದಿಂದ ಕೊರತೆ ಉಂಟಾಗುತ್ತಿದೆ. ಈ ಹಿನ್ನೆಲೆ ಬುದ್ಧಪ್ರಜ್ಞಾ ಮಕ್ಕಳ ಮೈತ್ರಿ ಕಾರ್ಯಕ್ರಮದ ಮೂಲಕ ಮಕ್ಕಳಲ್ಲಿ ಉತ್ತಮ ಚಿಂತನೆ ಬೆಳೆಸುವ ಪ್ರಯತ್ನ ಮಾಡಲಾಗುತ್ತಿದೆ ಎಂದರು.

ದೇಶಕ್ಕೆ ಆದರ್ಶ ಮಾರ್ಗ ತೋರಿದ ಮಹಾನ್ ದಾರ್ಶನಿಕರು, ಸಮಾಜ ಸುಧಾರಕರು ಹಾಗೂ ಮಹನೀಯರ ಜೀವನ ಸಂದೇಶಗಳನ್ನು ಮಕ್ಕಳಿಗೆ ಪರಿಚಯಿಸಿ, ಅವರ ಚಿಂತನೆಗಳನ್ನು ದಿನನಿತ್ಯದ ಬದುಕಿನಲ್ಲಿ ಅಳವಡಿಸಿಕೊಳ್ಳುವಂತೆ ಪ್ರೇರೇಪಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಮಹನೀಯರ ಜೀವನಚರಿತ್ರೆ, ಹೋರಾಟ, ತತ್ವಗಳು ಮತ್ತು ಸಾಮಾಜಿಕ ಸಂದೇಶಗಳ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸುವ ಮೂಲಕ ಉತ್ತಮ ಪ್ರಜೆಗಳನ್ನಾಗಿ ರೂಪಿಸುವ ಆಶಯ ಹೊಂದಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ 1ರಿಂದ 16 ವರ್ಷದೊಳಗಿನ ಮಕ್ಕಳು ಭಾಗವಹಿಸಲಿದ್ದಾರೆ. ಮಕ್ಕಳ ಪ್ರತಿಭೆ ಮತ್ತು ಸೃಜನಶೀಲತೆಯನ್ನು ಹೊರತರುವ ಉದ್ದೇಶದಿಂದ ಗಾಯನ, ನೃತ್ಯ, ಭಾಷಣ, ಚಿತ್ರಕಲೆ, ಮಣ್ಣಿನ ಮಾದರಿ ತಯಾರಿಕೆ, ರಸಪ್ರಶ್ನೆ, ಬುದ್ಧ ಚಾಟಿಂಗ್, ನಾಟಕ ಸೇರಿದಂತೆ ಒಟ್ಟು 32 ವಿವಿಧ ಪ್ರಕಾರಗಳ ಪ್ರದರ್ಶನಗಳನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ವಿಶೇಷವಾಗಿ ಡಾ. ಬಿ.ಆರ್. ಅಂಬೇಡ್ಕರ್, ಗೌತಮ ಬುದ್ಧ, ಸಾವಿತ್ರಿಬಾಯಿ ಫುಲೆ, ಜ್ಯೋತಿಬಾ ಫುಲೆ, ಬಸವಣ್ಣ, ಕನಕದಾಸ, ಒನಕೆ ಓಬವ್ವ, ರಮಾಬಾಯಿ ಸೇರಿದಂತೆ ಹಲವು ಮಹಾನ್ ವ್ಯಕ್ತಿಗಳ ವೇಷಭೂಷಣ ಪ್ರದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಮಕ್ಕಳಿಗೆ ಈ ಮಹನೀಯರ ಕುರಿತು ತಿಳಿದುಕೊಳ್ಳುವ ಜೊತೆಗೆ ಅವರ ಆದರ್ಶ ಮತ್ತು ಸಂದೇಶಗಳನ್ನು ಸೃಜನಾತ್ಮಕವಾಗಿ ವ್ಯಕ್ತಪಡಿಸಲು ಈ ಕಾರ್ಯಕ್ರಮ ವೇದಿಕೆಯಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸುವ ಪ್ರತಿಯೊಬ್ಬ ಮಗುವಿಗೂ ಪುಸ್ತಕ, ಪೆನ್ನು, ಪ್ರಮಾಣಪತ್ರ ಹಾಗೂ ಪದಕಗಳನ್ನು ನೀಡಿ ಪ್ರೋತ್ಸಾಹಿಸಲಾಗುವುದು. ಸ್ಪರ್ಧೆಯಲ್ಲಿ ಗೆಲುವು-ಸೋಲಿಗಿಂತ ಮಕ್ಕಳ ಪಾಲ್ಗೊಳ್ಳುವಿಕೆ, ಅವರ ಆತ್ಮವಿಶ್ವಾಸ ಮತ್ತು ಹೊಸ ವಿಷಯಗಳನ್ನು ಕಲಿಯುವ ಮನೋಭಾವಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ಸಮಾನತೆ, ಮಾನವೀಯತೆ, ಜ್ಞಾನ, ವೈಚಾರಿಕತೆ ಮತ್ತು ಸಾಮಾಜಿಕ ನ್ಯಾಯದ ಸಂದೇಶಗಳನ್ನು ಮಕ್ಕಳಲ್ಲಿ ಮೈಗೂಡಿಸುವುದು ಕಾರ್ಯಕ್ರಮದ ಮತ್ತೊಂದು ಪ್ರಮುಖ ಆಶಯವಾಗಿದೆ. ಮಕ್ಕಳು ಬಾಲ್ಯದಿಂದಲೇ ಉತ್ತಮ ಆಲೋಚನೆಗಳನ್ನು ಅಳವಡಿಸಿಕೊಂಡರೆ ಭವಿಷ್ಯದಲ್ಲಿ ಜವಾಬ್ದಾರಿಯುತ, ಸಂವೇದನಾಶೀಲ ಹಾಗೂ ಉತ್ತಮ ನಾಗರಿಕರಾಗಿ ಬೆಳೆಯಲು ಸಾಧ್ಯವಾಗುತ್ತದೆ ಎಂದು ದಮ್ಮ ದೀಪ ಬಂತೇಜಿ ಹೇಳಿದರು.

ಎರಡು ದಿನಗಳ ಕಾರ್ಯಕ್ರಮದಲ್ಲಿ ಮಕ್ಕಳ ಪ್ರತಿಭಾ ಪ್ರದರ್ಶನಗಳ ಜೊತೆಗೆ ಧಾರ್ಮಿಕ, ಸಾಮಾಜಿಕ ಮತ್ತು ವೈಚಾರಿಕ ಸಂದೇಶಗಳನ್ನು ನೀಡುವ ವಿವಿಧ ಕಾರ್ಯಕ್ರಮಗಳೂ ನಡೆಯಲಿವೆ. ಪಾಲಕರು ತಮ್ಮ ಮಕ್ಕಳೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಪೂಜ್ಯ ಬಂತೇಜಿಗಳಾದ ಮನೋರಕ್ಕಿತ ಬಂತೇಜಿ, ಬೋಧಿದತ್ತ ಬಂತೇಜಿ, ನಾಗರತ್ನ ಬಂತೇಜಿ, ವರಜ್ಯೋತಿ ಬಂತೇಜಿ ಹಾಗೂ ಉರಿಲಿಂಗ ಪೆದ್ದಿ ಮಠದ ಪೀಠಾಧ್ಯಕ್ಷ ಪೂಜ್ಯ ಜ್ಞಾನ ಪ್ರಕಾಶ ಸ್ವಾಮೀಜಿ ಭಾಗವಹಿಸಲಿದ್ದಾರೆ. ಜೊತೆಗೆ ರಘೋತ್ತಮ ಹೋ.ಬ., ಮೈಸೂರು ಮಾಜಿ ಮಹಾಪೌರ ಪುರುಷೋತ್ತಮ, ಮಲ್ಲುಂಡಿ ಮಹಾದೇವ ಸ್ವಾಮಿ, ಚಂದ್ರಕಾಂತ ರಂತ ಸೇರಿದಂತೆ ಬುದ್ಧಿಜೀವಿಗಳು, ಧಮ್ಮಚಾರಿಗಳು, ಧಮ್ಮ ಉಪಾಸಕರು, ಹಿರಿಯ ಅಧಿಕಾರಿಗಳು, ಜನಪ್ರತಿನಿಧಿಗಳು, ಪ್ರಗತಿಪರರು ಹಾಗೂ ವಿವಿಧ ಸಂಘಟನೆಗಳ ಹೋರಾಟಗಾರರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜ್ಞಾನ ಪ್ರಕಾಶ ಸ್ವಾಮೀಜಿ, ಎಂ. ವಸಂತ, ಮಲ್ಲೇ ಕೊಲಿಮಿ, ಶಿವರಾಜ್ ಜಾನೇಕಲ್, ವಿಶ್ವನಾಥ್ ಪಟ್ಟಿ, ಭೀಮಣ್ಣ ಮಂಚಾಲಿ, ಅರ್ಚನಾ ಸುಂಕಾರಿ, ಜಿಂದಪ್ಪ, ಪ್ರಭು ಹೇಮನಾಳ, ಸಂತೋಷ ನಂದಿನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಇರಾನ್ ಕ್ಷಿಪಣಿ ದಾಳಿಗೆ ಅಮೆರಿಕ ಪ್ರತಿದಾಳಿ, ಮೂರು ತೈಲ ಟ್ಯಾಂಕರ್‌ಗಳು ಗುರಿ

ಎಂದು CENTCOM ತಿಳಿಸಿದೆ.

ಇದೇ ವೇಳೆ ಗಲ್ಫ್ ಆಫ್ ಓಮನ್ ಪ್ರದೇಶದಲ್ಲಿದ್ದ M/T Kylo ಹೆಸರಿನ ಖಾಲಿ ಕಚ್ಚಾ ತೈಲ ಸಾಗಣೆ ಹಡಗನ್ನೂ ಅಮೆರಿಕ ಗುರಿಯಾಗಿಸಿದೆ. ದಾಳಿಗೆ ಮುನ್ನ ಹಡಗಿನ ಸಿಬ್ಬಂದಿಗೆ ಹಡಗು ತೊರೆಯುವಂತೆ ಸೂಚನೆ ನೀಡಲಾಗಿತ್ತು. ಸಿಬ್ಬಂದಿ ಹೊರಬಂದ ನಂತರ ಹಡಗಿನ ಪ್ರಮುಖ ಭಾಗಗಳ ಮೇಲೆ ಹಲವು ಬಾರಿ ದಾಳಿ ನಡೆಸಿ ಅದು ಕಾರ್ಯನಿರ್ವಹಿಸದಂತೆ ಮಾಡಲಾಗಿದೆ ಎಂದು ಅಮೆರಿಕ ಹೇಳಿದೆ.

CENTCOM ಬಿಡುಗಡೆ ಮಾಡಿದೆ ಎನ್ನಲಾದ ವಿಡಿಯೊದಲ್ಲಿ ಕ್ಷಿಪಣಿಗಳು ಹಡಗುಗಳಿಗೆ ಅಪ್ಪಳಿಸಿದ ಬಳಿಕ ಭಾರೀ ಪ್ರಮಾಣದಲ್ಲಿ ಬೆಂಕಿ ಮತ್ತು ಹೊಗೆ ಕಾಣಿಸಿಕೊಂಡಿದೆ ಎಂದು ವರದಿಯಾಗಿದೆ.

ಈ ಹಡಗುಗಳು IRGC ಮತ್ತು ಅದರ ಪ್ರಾದೇಶಿಕ ಬೆಂಬಲಿಗ ಸಂಘಟನೆಗಳಿಗೆ ಹಣಕಾಸು ಒದಗಿಸುವ ಬಹುಕೋಟಿ ಡಾಲರ್ ಮೌಲ್ಯದ ನೆರಳು ಜಾಲದ ಭಾಗವಾಗಿದ್ದವು ಎಂಬುದು ಅಮೆರಿಕದ ಆರೋಪವಾಗಿದೆ.

CENTCOM ಕಮಾಂಡರ್ ಅಡ್ಮಿರಲ್ ಬ್ರಾಡ್ ಕೂಪರ್ ಅವರು, ಅಮೆರಿಕದ ನೌಕಾಪಡೆಗಳ ಮೇಲೆ ದಾಳಿ ನಡೆಸಿದರೆ ಅದರ ಆರ್ಥಿಕ ಪರಿಣಾಮ ಇನ್ನಷ್ಟು ಗಂಭೀರವಾಗಲಿದೆ ಎಂಬ ಎಚ್ಚರಿಕೆ ನೀಡಿದ್ದಾರೆ. ಅಮೆರಿಕದ ಎರಡು ಹಡಗುಗಳ ಮೇಲೆ ದಾಳಿ ನಡೆಸಿದರೆ, ಪ್ರತಿಯಾಗಿ ಇರಾನ್‌ಗೆ ಸಂಬಂಧಿಸಿದ ಇನ್ನಷ್ಟು ಹಡಗುಗಳನ್ನು ಗುರಿಯಾಗಿಸಲಾಗುವುದು ಎಂಬ ಸಂದೇಶವನ್ನು ಅವರು ನೀಡಿದ್ದಾರೆ.

ಅಮೆರಿಕ ನಡೆಸಿದ ದಾಳಿಯನ್ನು ಇರಾನ್ ವಿದೇಶಾಂಗ ಸಚಿವಾಲಯ ತೀವ್ರವಾಗಿ ಖಂಡಿಸಿದೆ. ಇರಾನ್‌ಗೆ ಸೇರಿದ ವಾಣಿಜ್ಯ ಹಡಗುಗಳನ್ನು ಗುರಿಯಾಗಿಸಿರುವುದು ಅಂತಾರಾಷ್ಟ್ರೀಯ ಕಾನೂನುಗಳಿಗೆ ವಿರುದ್ಧವಾದ ಆಕ್ರಮಣಕಾರಿ ಕ್ರಮ ಎಂದು ಇರಾನ್ ಆರೋಪಿಸಿದೆ.

ದಕ್ಷಿಣ ಇರಾನ್‌ನ ಹೋರ್ಮೊಜ್ಗಾನ್ ಪ್ರಾಂತ್ಯದ ಜಾಸ್ಕ್ ಪ್ರದೇಶದಲ್ಲಿರುವ ಇರಾನ್ ಸರ್ಕಾರಿ ಮಾಧ್ಯಮದ ವರದಿಗಾರರ ಪ್ರಕಾರ, ದಾಳಿಗೊಳಗಾದ ಟ್ಯಾಂಕರ್‌ಗಳಲ್ಲಿ ಒಂದು ಖಾಲಿಯಾಗಿದ್ದು, ಮತ್ತೊಂದು ತೈಲ ಸಾಗಿಸುತ್ತಿತ್ತು ಎನ್ನಲಾಗಿದೆ. ಎರಡೂ ಹಡಗುಗಳ ಸಿಬ್ಬಂದಿಯನ್ನು ಲೈಫ್‌ಬೋಟ್‌ಗಳ ಮೂಲಕ ಸುರಕ್ಷಿತವಾಗಿ ದಡಕ್ಕೆ ಕರೆತರಲಾಗಿದೆ ಎಂದು ತಿಳಿಸಲಾಗಿದೆ.

ಖಾರ್ಗ್ ದ್ವೀಪದ ಸಮೀಪ ನಡೆದ ದಾಳಿಯಲ್ಲಿ ಯಾವುದೇ ಸಾವು–ನೋವು ಸಂಭವಿಸಿಲ್ಲ ಎಂದು ಇರಾನ್ ಸರ್ಕಾರಿ ಮಾಧ್ಯಮ ವರದಿ ಮಾಡಿದೆ.

ಅಮೆರಿಕದ ಸೇನಾ ಕಾರ್ಯಾಚರಣೆ ಇದೇ ರೀತಿಯಲ್ಲಿ ಮುಂದುವರಿದರೆ, ಅಮೆರಿಕದ ಯುದ್ಧನೌಕೆಗಳ ವಿರುದ್ಧ ಇರಾನ್ ನಡೆಸುವ ಪ್ರತೀಕಾರ ಹಿಂದಿಗಿಂತಲೂ ತೀವ್ರವಾಗಲಿದೆ. ಅಲ್ಲದೆ ಸಂಘರ್ಷವು ಇನ್ನಷ್ಟು ಪ್ರದೇಶಗಳಿಗೆ ವಿಸ್ತರಿಸುವ ಸಾಧ್ಯತೆಯೂ ಇದೆ ಎಂದು ಇರಾನ್‌ನ ಖತಮ್ ಅಲ್–ಅನ್ಬಿಯಾ ಕೇಂದ್ರ ಸೇನಾ ಕಮಾಂಡ್ ಎಚ್ಚರಿಸಿದೆ.

ಜಾಗತಿಕ ತೈಲ ಸಾಗಣೆಯ ದೃಷ್ಟಿಯಿಂದ ಹಾರ್ಮುಜ್ ಜಲಸಂಧಿ ಅತ್ಯಂತ ಮಹತ್ವದ ಸಮುದ್ರ ಮಾರ್ಗವಾಗಿದೆ. ಸಂಘರ್ಷಕ್ಕೂ ಮುನ್ನ ಜಾಗತಿಕ ತೈಲ ಪೂರೈಕೆಯ ಸುಮಾರು ಐದನೇ ಒಂದು ಭಾಗ ಈ ಮಾರ್ಗದ ಮೂಲಕ ಸಾಗುತ್ತಿತ್ತು ಎಂದು ವರದಿಗಳು ತಿಳಿಸಿವೆ.

ಹೀಗಾಗಿ ಈ ಜಲಮಾರ್ಗದ ಮೇಲಿನ ನಿಯಂತ್ರಣ, ವಾಣಿಜ್ಯ ಹಡಗುಗಳ ಸುರಕ್ಷತೆ ಹಾಗೂ ತೈಲ ಸಾಗಣೆಯ ನಿರಂತರತೆ ಅಮೆರಿಕ–ಇರಾನ್ ಸಂಘರ್ಷದಲ್ಲಿ ಪ್ರಮುಖ ವಿಚಾರಗಳಾಗಿವೆ.

ಹಾರ್ಮುಜ್ ಪ್ರದೇಶದಲ್ಲಿ ವಾಣಿಜ್ಯ ಹಡಗುಗಳ ಮೇಲೆ ನಡೆದ ದಾಳಿಗಳ ಬಳಿಕ ಜುಲೈನಲ್ಲಿ ಜಾರಿಯಲ್ಲಿದ್ದ ದುರ್ಬಲ ಕದನ ವಿರಾಮವೂ ಕುಸಿದಿದೆ ಎನ್ನಲಾಗಿದೆ. ಆ ಬಳಿಕ ಎರಡೂ ರಾಷ್ಟ್ರಗಳ ನಡುವೆ ಪರಸ್ಪರ ಬೆದರಿಕೆ, ಕ್ಷಿಪಣಿ ದಾಳಿ ಮತ್ತು ಆರ್ಥಿಕ ನಿರ್ಬಂಧಗಳು ಹೆಚ್ಚಾಗಿವೆ.

ಇರಾನ್ ಹಾರ್ಮುಜ್ ಜಲಸಂಧಿಯಲ್ಲಿ ತನ್ನ ಪ್ರಭಾವ ಮುಂದುವರಿಸುವ ಪ್ರಯತ್ನದಲ್ಲಿದ್ದರೆ, ಅಮೆರಿಕ ಇರಾನ್‌ನ ಬಂದರುಗಳು ಮತ್ತು ಸಮುದ್ರ ವ್ಯಾಪಾರ ಜಾಲಗಳ ಮೇಲೆ ಒತ್ತಡ ಹೆಚ್ಚಿಸುತ್ತಿದೆ.

ಇದರ ನಡುವೆ, ಸಂಘರ್ಷದ ತೀವ್ರತೆಯನ್ನು ಕಡಿಮೆ ಮಾಡಿ ಬಿಂಬಿಸುವ ಪ್ರಯತ್ನ ಅಮೆರಿಕ ಆಡಳಿತದಿಂದ ನಡೆಯುತ್ತಿದೆ ಎಂದು ವರದಿಯಾಗಿದೆ.

ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಇತ್ತೀಚೆಗೆ, ನಡೆಯುತ್ತಿರುವ ಬೆಳವಣಿಗೆಯನ್ನು ಯುದ್ಧ ಎಂದು ಕರೆಯುವುದಿಲ್ಲ ಎಂದು ಹೇಳಿದ್ದರು. ಸಕ್ರಿಯ ಗುಂಡಿನ ಚಕಮಕಿ ನಿರಂತರವಾಗಿ ನಡೆಯುತ್ತಿಲ್ಲ ಎಂಬ ಅಭಿಪ್ರಾಯವನ್ನೂ ಅವರು ವ್ಯಕ್ತಪಡಿಸಿದ್ದರು.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೂಡ ಇರಾನ್‌ನೊಂದಿಗಿನ ಸಂಘರ್ಷವನ್ನು ದೊಡ್ಡ ಮಟ್ಟದ ಯುದ್ಧವಲ್ಲ ಎಂಬ ರೀತಿಯಲ್ಲಿ ಪ್ರತಿಕ್ರಿಯಿಸಿ, ಇದು ದೊಡ್ಡ ವಿಷಯವೇನಲ್ಲ ಎಂದು ಹೇಳಿರುವುದಾಗಿ ವರದಿಯಾಗಿದೆ.

ಇದಕ್ಕೆ ಪ್ರತಿಯಾಗಿ ಇರಾನ್‌ನ ಭದ್ರತಾ ಮುಖ್ಯಸ್ಥ ಮೊಹ್ಸೆನ್ ರೆಝಾಯಿ, ಅಮೆರಿಕದ ವಿರುದ್ಧ ಇರಾನ್ ಹೊಸ ತಂತ್ರಗಾರಿಕೆಯನ್ನು ಅಳವಡಿಸಿಕೊಂಡಿದ್ದು, ಅದರ ಪರಿಣಾಮ ಗಂಭೀರವಾಗಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಹಾರ್ಮುಜ್ ಜಲಸಂಧಿಯ ಮೇಲಿನ ಇರಾನ್‌ನ ಹಿಡಿತವನ್ನು ದುರ್ಬಲಗೊಳಿಸಲು ಅಮೆರಿಕ ನಿರಂತರ ಒತ್ತಡ ಹೇರುತ್ತಿದೆ. ವ್ಯಾನ್ಸ್ ಅವರು, ಹಾರ್ಮುಜ್ ಜಲಸಂಧಿಯ ಮೇಲಿನ ಇರಾನ್‌ನ ಪರಿಣಾಮಕಾರಿ ನಿಯಂತ್ರಣ ಕುಸಿದಿದೆ ಎಂದು ಹೇಳಿರುವುದಾಗಿ ವರದಿಯಾಗಿದೆ.

ಮತ್ತೊಂದೆಡೆ, ಇರಾನ್ ವಾಣಿಜ್ಯ ಹಡಗುಗಳ ಮೇಲಿನ ದಾಳಿಯನ್ನು ನಿಲ್ಲಿಸುವವರೆಗೆ ತೆಹ್ರಾನ್ ಜೊತೆ ಮಾತುಕತೆ ಪುನರಾರಂಭಿಸುವುದಿಲ್ಲ ಎಂಬ ನಿಲುವನ್ನೂ ಅಮೆರಿಕ ವ್ಯಕ್ತಪಡಿಸಿದೆ.

ಹಾರ್ಮುಜ್ ಜಲಸಂಧಿಯಲ್ಲಿನ ಉದ್ವಿಗ್ನತೆ ಜಾಗತಿಕ ತೈಲ ಪೂರೈಕೆ ಹಾಗೂ ಇಂಧನ ಬೆಲೆಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ. ಸಂಘರ್ಷ ತೀವ್ರಗೊಂಡರೆ ತೈಲ ಸಾಗಣೆಗೆ ಅಡ್ಡಿಯಾಗಬಹುದು ಎಂಬ ಆತಂಕವೂ ವ್ಯಕ್ತವಾಗಿದೆ.

ಅಮೆರಿಕದಲ್ಲಿ ಮುಂಬರುವ ಮಧ್ಯಂತರ ಚುನಾವಣೆಗಳ ಹಿನ್ನೆಲೆಯಲ್ಲಿ ಇಂಧನ ಬೆಲೆ ಏರಿಕೆ ರಾಜಕೀಯವಾಗಿ ಪರಿಣಾಮ ಬೀರುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಹಾರ್ಮುಜ್ ಮೂಲಕ ತೈಲ ಸಾಗಣೆ ಕ್ರಮೇಣ ಸಂಘರ್ಷಕ್ಕೂ ಮುನ್ನದ ಮಟ್ಟಕ್ಕೆ ಮರಳುತ್ತಿದೆ ಎಂಬ ಸಂದೇಶವನ್ನು ಟ್ರಂಪ್ ಆಡಳಿತ ನೀಡಲು ಪ್ರಯತ್ನಿಸುತ್ತಿದೆ ಎನ್ನಲಾಗಿದೆ.

ಸೇನಾ ಕಾರ್ಯಾಚರಣೆಗಳ ಜೊತೆಗೆ ಇರಾನ್ ಮೇಲೆ ಆರ್ಥಿಕ ಒತ್ತಡ ಹೆಚ್ಚಿಸುವ ಕ್ರಮವನ್ನೂ ಅಮೆರಿಕ ಮುಂದುವರಿಸಿದೆ.

ಇರಾನ್‌ನ ರೆವಲ್ಯೂಷನರಿ ಗಾರ್ಡ್‌ಗಳೊಂದಿಗೆ ಹಣಕಾಸು ಸಂಪರ್ಕ ಹೊಂದಿರುವ ಆರೋಪದ ಮೇಲೆ ಟರ್ಕಿಯ ಬ್ಯಾಂಕ್‌ವೊಂದರ ವಿರುದ್ಧ ಅಮೆರಿಕದ ಖಜಾನೆ ಇಲಾಖೆ ಹೊಸ ನಿರ್ಬಂಧಗಳನ್ನು ಘೋಷಿಸಿದೆ ಎಂದು ವರದಿಯಾಗಿದೆ.

ಇದಕ್ಕೂ ಮುನ್ನ ಈಜಿಪ್ಟ್‌ನ ಪ್ರಮುಖ ಬ್ಯಾಂಕ್‌ವೊಂದರ ಯುಎಇ ಕಾರ್ಯಾಚರಣೆಗಳನ್ನು ಅಮೆರಿಕದ ಹಣಕಾಸು ವ್ಯವಸ್ಥೆಯಿಂದ ದೂರವಿಡುವ ಕ್ರಮವನ್ನೂ ವಾಷಿಂಗ್ಟನ್ ಕೈಗೊಂಡಿದೆ ಎನ್ನಲಾಗಿದೆ.

ಇರಾನ್‌ನ ಆರ್ಥಿಕ ಸಂಪನ್ಮೂಲಗಳ ಮೇಲೆ ಗರಿಷ್ಠ ಒತ್ತಡ ಹೇರುವ ಮೂಲಕ ಅದರ ಹಣಕಾಸು ಸಾಮರ್ಥ್ಯವನ್ನು ಕುಗ್ಗಿಸುವ ತಂತ್ರ ಅನುಸರಿಸಲಾಗುತ್ತಿದೆ ಎಂದು ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಹೇಳಿರುವುದಾಗಿ ವರದಿಯಾಗಿದೆ.

ಅಮೆರಿಕದ ಈ ಒತ್ತಡ ಅಭಿಯಾನಕ್ಕೆ ಬೆಂಬಲ ನೀಡದ ರಾಷ್ಟ್ರಗಳು ಮತ್ತು ಹಣಕಾಸು ಸಂಸ್ಥೆಗಳ ವಿರುದ್ಧವೂ ಕ್ರಮ ಕೈಗೊಳ್ಳಬಹುದೆಂಬ ಎಚ್ಚರಿಕೆಯನ್ನು ವಾಷಿಂಗ್ಟನ್ ನೀಡಿದೆ.

ಒಟ್ಟಾರೆ, ಹಾರ್ಮುಜ್ ಜಲಸಂಧಿಯಲ್ಲಿ ನಡೆಯುತ್ತಿರುವ ಸೇನಾ ಚಟುವಟಿಕೆ, ತೈಲ ಟ್ಯಾಂಕರ್‌ಗಳ ಮೇಲಿನ ದಾಳಿ, ಇರಾನ್‌ನ ಪ್ರತೀಕಾರದ ಎಚ್ಚರಿಕೆ ಹಾಗೂ ಅಮೆರಿಕದ ಆರ್ಥಿಕ ನಿರ್ಬಂಧಗಳಿಂದ ಎರಡೂ ರಾಷ್ಟ್ರಗಳ ನಡುವಿನ ಉದ್ವಿಗ್ನತೆ ಮತ್ತಷ್ಟು ಹೆಚ್ಚುವ ಲಕ್ಷಣಗಳು ಗೋಚರಿಸುತ್ತಿವೆ. ಜಾಗತಿಕ ಇಂಧನ ಪೂರೈಕೆ ಮತ್ತು ಪ್ರಮುಖ ಸಮುದ್ರ ವ್ಯಾಪಾರ ಮಾರ್ಗದ ಭದ್ರತೆಯ ದೃಷ್ಟಿಯಿಂದ ಮುಂದಿನ ಬೆಳವಣಿಗೆಗಳು ಮಹತ್ವ ಪಡೆದುಕೊಂಡಿವೆ.

# ನಕಲಿ ಮದ್ಯ ಸೇವನೆಗೆ 12 ಮಂದಿ ಬಲಿ: ಹಲವರು ಆಸ್ಪತ್ರೆಗೆ ದಾಖಲು

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ಅವರು ಪ್ರಕರಣದ ಸಮಗ್ರ ತನಿಖೆಗೆ ಆದೇಶಿಸಿದ್ದಾರೆ. ನಕಲಿ ಮದ್ಯ ತಯಾರಿಕೆ ಮತ್ತು ಪೂರೈಕೆಯಲ್ಲಿ ಭಾಗಿಯಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಮುನ್ನೆಚ್ಚರಿಕಾ ಕ್ರಮವಾಗಿ ಘಟನೆ ನಡೆದ ಪ್ರದೇಶದ ಸುತ್ತಮುತ್ತಲಿನ ಆರು ಮದ್ಯದ ಅಂಗಡಿಗಳನ್ನು ಸೀಲ್ ಮಾಡಲಾಗಿದೆ. ಅಲ್ಲದೆ, ಮದ್ಯದ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗೆ ಕಳುಹಿಸುವ ಕಾರ್ಯವೂ ನಡೆಯುತ್ತಿದೆ ಎಂದು ತಿಳಿದುಬಂದಿದೆ.

ಪ್ರಾಥಮಿಕ ತನಿಖೆಯಲ್ಲಿ ನಕಲಿ ಮದ್ಯದ ಪೂರೈಕೆ ಜಾಲವು ಉತ್ತರ ಪ್ರದೇಶದ ಲಲಿತಪುರ ಗಡಿಯಿಂದ ಕಾರ್ಯನಿರ್ವಹಿಸುತ್ತಿರುವ ಸಾಧ್ಯತೆ ಪತ್ತೆಯಾಗಿದೆ. ಆರೋಪಿಗಳು ಲಲಿತಪುರ ಭಾಗದಲ್ಲಿ ನಕಲಿ ಮದ್ಯ ತಯಾರಿಸಿ, ಅಸಲಿ ಬ್ರ್ಯಾಂಡ್‌ಗಳಂತೆ ಕಾಣುವಂತೆ ನಕಲಿ ಲೇಬಲ್‌ಗಳು, ಬಾಟಲಿಗಳ ಕ್ಯಾಪ್‌ಗಳು ಹಾಗೂ ಕ್ಯೂಆರ್ ಕೋಡ್‌ಗಳನ್ನು ಅಂಟಿಸುತ್ತಿದ್ದರು ಎನ್ನಲಾಗಿದೆ.

ನಂತರ ಕಾರು ಮತ್ತು ಬೈಕ್‌ಗಳ ಮೂಲಕ ಈ ನಕಲಿ ಮದ್ಯವನ್ನು ಸಾಗರ ಜಿಲ್ಲೆಯ ಗಡಿ ಗ್ರಾಮಗಳಿಗೆ ಸಾಗಿಸಿ ಮಾರಾಟ ಮಾಡಲಾಗುತ್ತಿತ್ತು ಎಂಬ ಮಾಹಿತಿ ತನಿಖೆಯಲ್ಲಿ ಹೊರಬಂದಿದೆ. ಈ ಜಾಲಕ್ಕೆ ಸ್ಥಳೀಯವಾಗಿ ಸಹಕಾರ ನೀಡಿದವರು ಯಾರು, ಮದ್ಯವನ್ನು ಯಾವ ಮಾರ್ಗದ ಮೂಲಕ ಪೂರೈಸಲಾಗುತ್ತಿತ್ತು ಹಾಗೂ ಎಷ್ಟು ಪ್ರದೇಶಗಳಿಗೆ ವಿತರಿಸಲಾಗಿದೆ ಎಂಬುದರ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಘಟನೆಯ ಹಿನ್ನೆಲೆಯಲ್ಲಿ ನಕಲಿ ಮದ್ಯ ಮಾರಾಟದ ಜಾಲದ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು, ಇಂತಹ ಪ್ರಕರಣಗಳು ಮರುಕಳಿಸದಂತೆ ಮದ್ಯದ ಅಂಗಡಿಗಳು ಮತ್ತು ಅಕ್ರಮ ಪೂರೈಕೆ ಜಾಲಗಳ ಮೇಲೆ ಕಟ್ಟುನಿಟ್ಟಿನ ನಿಗಾವಹಿಸಬೇಕು ಎಂಬ ಒತ್ತಾಯವೂ ಕೇಳಿಬಂದಿದೆ.

# ಕಾಕತೀಯ ಸೌಹಾರ್ದ ಸಹಕಾರಿ ಸಂಘಕ್ಕೆ ₹49 ಲಕ್ಷ ಲಾಭ: ಸದಸ್ಯರಿಗೆ ಶೇ.19 ಡಿವಿಡೆಂಟ್ ಘೋಷಣೆ



ಮಾನ್ವಿ: ಪರಸ್ಪರ ಸಹಕಾರ, ನಂಬಿಕೆ ಹಾಗೂ ಜವಾಬ್ದಾರಿಯುತ ಆಡಳಿತದ ಮೂಲಕವೇ ಸಹಕಾರಿ ಸಂಘಗಳು ಅಭಿವೃದ್ಧಿಯ ಹಾದಿಯಲ್ಲಿ ಮುನ್ನಡೆಯಲು ಸಾಧ್ಯ ಎಂದು ಶಾಸಕ ಹಂಪಯ್ಯ ನಾಯಕ ಹೇಳಿದರು.

ಪಟ್ಟಣದ ಕಾಕತೀಯ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ನಡೆದ ಕಾಕತೀಯ ಸೌಹಾರ್ದ ಸಹಕಾರಿ ಸಂಘ ನಿಯಮಿತದ 13ನೇ ವಾರ್ಷಿಕ ಸರ್ವಸದಸ್ಯರ ಸಾಮಾನ್ಯ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾನ್ಯ ಜನರಿಗೆ ಅಗತ್ಯವಿರುವ ಸಣ್ಣ ಪ್ರಮಾಣದ ಸಾಲ ಸೌಲಭ್ಯಗಳನ್ನು ಸುಲಭವಾಗಿ ಒದಗಿಸುವ ಮೂಲಕ ಸಹಕಾರಿ ಸಂಘಗಳು ಗ್ರಾಮೀಣ ಹಾಗೂ ನಗರ ಪ್ರದೇಶಗಳ ಆರ್ಥಿಕ ಚಟುವಟಿಕೆಗಳಿಗೆ ಮಹತ್ವದ ಕೊಡುಗೆ ನೀಡುತ್ತಿವೆ. ರೈತರು, ಸಣ್ಣ ವ್ಯಾಪಾರಿಗಳು, ಮಧ್ಯಮ ವರ್ಗದ ಕುಟುಂಬಗಳು ಹಾಗೂ ಸ್ವಯಂ ಉದ್ಯೋಗ ಕೈಗೊಳ್ಳುವವರಿಗೆ ಸಹಕಾರಿ ಕ್ಷೇತ್ರವು ಆರ್ಥಿಕ ಆಧಾರವಾಗಿ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

ಸಹಕಾರಿ ಸಂಸ್ಥೆಯ ಆಡಳಿತ ಮಂಡಳಿ, ಸಿಬ್ಬಂದಿ ಹಾಗೂ ಸದಸ್ಯರು ಪರಸ್ಪರ ವಿಶ್ವಾಸ ಮತ್ತು ಸಹಕಾರ ಮನೋಭಾವದಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಸಂಸ್ಥೆ ದೀರ್ಘಕಾಲಿಕವಾಗಿ ಅಭಿವೃದ್ಧಿ ಹೊಂದಲು ಸಾಧ್ಯ. ಕಾಕತೀಯ ಸೌಹಾರ್ದ ಸಹಕಾರಿ ಸಂಘವು ₹49 ಲಕ್ಷ ಲಾಭ ಗಳಿಸುವ ಮೂಲಕ ಉತ್ತಮ ಸಾಧನೆ ಮಾಡಿರುವುದು ಸಂತಸದ ಸಂಗತಿ ಎಂದು ಪ್ರಶಂಸಿಸಿದರು.

ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಸಹಕಾರಿ ಸಂಘಗಳ ಮೇಲೆ ಜನರು ಇಟ್ಟಿರುವ ನಂಬಿಕೆಯನ್ನು ಉಳಿಸುವುದು ಅತ್ಯಂತ ಮುಖ್ಯ. ಸದಸ್ಯರು ಮತ್ತು ಠೇವಣಿದಾರರು ಹೂಡಿಕೆ ಮಾಡಿರುವ ಹಣವನ್ನು ಸುರಕ್ಷಿತವಾಗಿ ನಿರ್ವಹಿಸಿ, ಅದನ್ನು ಮತ್ತಷ್ಟು ಬೆಳೆಸುವ ಜವಾಬ್ದಾರಿ ಸಹಕಾರಿ ಸಂಸ್ಥೆಗಳ ಮೇಲಿದೆ ಎಂದು ಹೇಳಿದರು.

ಕಾಕತೀಯ ಸೌಹಾರ್ದ ಸಹಕಾರಿ ಸಂಘವು ಮುಂದಿನ ದಿನಗಳಲ್ಲಿ ಗ್ರಾಮೀಣ ಭಾಗಗಳಲ್ಲಿಯೂ ಹೆಚ್ಚಿನ ಶಾಖೆಗಳನ್ನು ಆರಂಭಿಸುವ ಮೂಲಕ ತನ್ನ ಸೇವಾ ವ್ಯಾಪ್ತಿಯನ್ನು ವಿಸ್ತರಿಸಬೇಕು. ಸಣ್ಣ ರೈತರು, ವ್ಯಾಪಾರಿಗಳು ಹಾಗೂ ಮಧ್ಯಮ ವರ್ಗದ ಜನರಿಗೆ ಇನ್ನಷ್ಟು ಪರಿಣಾಮಕಾರಿಯಾಗಿ ಆರ್ಥಿಕ ನೆರವು ನೀಡುವಂತಾಗಬೇಕು. ಸಂಘವು ನಿರಂತರವಾಗಿ ಅಭಿವೃದ್ಧಿ ಪಥದಲ್ಲಿ ಸಾಗಲಿ ಎಂದು ಶ್ರೀಗಳು ಹಾರೈಸಿದರು.

ಕಾಕತೀಯ ಸೌಹಾರ್ದ ಸಹಕಾರಿ ಸಂಘ ನಿಯಮಿತದ ಅಧ್ಯಕ್ಷ ಗುಣಂ ಪಾಪರಾವ್ ಮಾತನಾಡಿ, ಸದಸ್ಯರ ನಿರಂತರ ಸಹಕಾರ ಮತ್ತು ವಿಶ್ವಾಸದಿಂದ ಸಂಘವು ₹49 ಲಕ್ಷ ಲಾಭ ಗಳಿಸಿದೆ. ಈ ಹಿನ್ನೆಲೆಯಲ್ಲಿ ಸದಸ್ಯರಿಗೆ ಶೇ.19ರಷ್ಟು ಡಿವಿಡೆಂಟ್ ಹಂಚಿಕೆ ಮಾಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಸಹಕಾರಿ ಸಂಘಕ್ಕೆ ಸ್ವಂತ ಕಟ್ಟಡ ನಿರ್ಮಿಸುವುದು ಹಾಗೂ ಸದಸ್ಯರಿಗೆ ಇನ್ನಷ್ಟು ಅಗತ್ಯ ಸೌಲಭ್ಯಗಳನ್ನು ಒದಗಿಸುವುದು ಆಡಳಿತ ಮಂಡಳಿಯ ಪ್ರಮುಖ ಗುರಿಯಾಗಿದೆ. ಸಂಘದ ಆರ್ಥಿಕ ಸಾಮರ್ಥ್ಯವನ್ನು ಹೆಚ್ಚಿಸುವ ಜೊತೆಗೆ ಸದಸ್ಯರಿಗೆ ಅನುಕೂಲವಾಗುವ ಹೊಸ ಸೇವೆಗಳನ್ನು ಪರಿಚಯಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸಹಕಾರಿಯಲ್ಲಿ ಉತ್ತಮ ವ್ಯವಹಾರ ನಡೆಸಿದ ಸದಸ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ಕಮ್ಮವಾರಿ ಸಂಘದ ಅಧ್ಯಕ್ಷ ವೆಲ್ಲಂಕಿ ರವಿಬಾಬು, ನಯೋಪ್ರ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ, ಕಾಕತೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಗೊಡವರ್ತಿ ಸತ್ಯನಾರಾಯಣ, ಎಲ್.ಎಂ.ಜಿ.ಎಸ್. ಶಾಲೆಯ ಅಧ್ಯಕ್ಷ ನಾಗೇಶ್ವರರಾವು ಮೋರಪತಿ, ಮಾಜಿ ಪುರಸಭೆ ಸದಸ್ಯ ಎಸ್. ಸುಬ್ರಮಣ್ಯಂ, ಸಹಕಾರಿಯ ಉಪಾಧ್ಯಕ್ಷ ಸಿ.ಎಚ್. ಸುಬ್ಬರಾವ್, ನಿರ್ದೇಶಕರಾದ ರಾಘವೇಂದ್ರರಾವ್, ಜಿ. ಸುಬ್ಬರಾವ್, ಡಿ. ಆದಿನಾರಾಯಣ, ಬಿ.ಡಿ. ಸತ್ಯನಾರಾಯಣ, ವಿ. ಶ್ರೀನಿವಾಸ, ಬಿ. ಕೇಶವರಾವ್, ಕೆ. ರಾಮಚಂದ್ರರಾಜು, ವೈ. ರಮೇಶ, ಸಿ. ಸುಧಾ, ಸಿ.ವಿ. ರಾಮಂಜನೇಯ್ಯಲು, ಸಹಕಾರಿಯ ಸಿಇಒ ಪಿ. ಬಸವಲಿಂಗಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಾಲುವೆಗಳಿಗೆ ಸಮರ್ಪಕ ನೀರು ಹರಿಸಿ, ಜೋಳದ ಹಣ ಬಿಡುಗಡೆ ಮಾಡಿ: ಬಿಜೆಪಿ ರೈತ ಮೋರ್ಚಾ ಮನವಿ




ಮಾನ್ವಿ: ಜಿಲ್ಲೆಯ ಕಾಲುವೆಗಳಿಗೆ ಸಮರ್ಪಕವಾಗಿ ನೀರು ಹರಿಸುವುದು, ರೈತರಿಗೆ ಬಾಕಿ ಇರುವ ಜೋಳ ಖರೀದಿ ಹಣವನ್ನು ಕೂಡಲೇ ಪಾವತಿಸುವುದು ಹಾಗೂ ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಿ ಪರಿಹಾರ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಭಾರತೀಯ ಜನತಾ ಪಾರ್ಟಿ ರೈತ ಮೋರ್ಚಾ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್ ಅವರಿಗೆ ಮನವಿ ಸಲ್ಲಿಸಲಾಯಿತು.

ಪಟ್ಟಣದ ಸರ್ಕಾರಿ ಪದವಿ ಕಾಲೇಜಿನ ಆವರಣದಲ್ಲಿ ಶನಿವಾರ ನಡೆದ ಜಿಲ್ಲಾ ಮಟ್ಟದ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮದಲ್ಲಿ ಬಿಜೆಪಿ ರೈತ ಮೋರ್ಚಾ ಜಿಲ್ಲಾ ಘಟಕದ ಅಧ್ಯಕ್ಷ ತೂಮು ದೊರೆಬಾಬು ನೇತೃತ್ವದಲ್ಲಿ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತೂಮು ದೊರೆಬಾಬು, ಜಿಲ್ಲೆಗೆ ನೀರು ಪೂರೈಸುವ ಎಡದಂಡೆ ಕಾಲುವೆ ಸಂಖ್ಯೆ 104 ಸೇರಿದಂತೆ ವಿವಿಧ ಉಪಕಾಲುವೆಗಳಿಗೆ ಜಲಾಶಯದಿಂದ ಸಮರ್ಪಕವಾಗಿ ನೀರು ಹರಿಸಲಾಗುತ್ತಿಲ್ಲ. ಕಾಲುವೆಗಳಲ್ಲಿ ನೀರಿನ ನಿರ್ವಹಣೆ ಹಾಗೂ ಗೇಜ್ ವ್ಯವಸ್ಥೆಯನ್ನು ಸಮರ್ಪಕವಾಗಿ ಕೈಗೊಳ್ಳದಿರುವ ಪರಿಣಾಮ ಕೊನೆಯ ಭಾಗದ ರೈತರ ಜಮೀನುಗಳಿಗೆ ನೀರು ತಲುಪುತ್ತಿಲ್ಲ ಎಂದು ಆರೋಪಿಸಿದರು.

ಕೊನೆಯ ಭಾಗದ ರೈತರಿಗೆ ನೀರು ಸಿಗದ ಕಾರಣ ಭತ್ತದ ನಾಟಿ ಸೇರಿದಂತೆ ಕೃಷಿ ಚಟುವಟಿಕೆಗಳನ್ನು ಸಮರ್ಪಕವಾಗಿ ಕೈಗೊಳ್ಳಲು ಸಾಧ್ಯವಾಗುತ್ತಿಲ್ಲ. ಇದರಿಂದ ರೈತರು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಆದ್ದರಿಂದ ಕಾಲುವೆಗಳಿಗೆ ನಿಗದಿತ ಪ್ರಮಾಣದಲ್ಲಿ ನೀರು ಹರಿಸಿ, ಕೊನೆಯ ಭಾಗದ ರೈತರ ಜಮೀನುಗಳಿಗೂ ನೀರು ತಲುಪುವಂತೆ ಗೇಜ್ ನಿರ್ವಹಣೆ ಮತ್ತು ನೀರು ಹಂಚಿಕೆ ವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯ ರೈತರು ಸರ್ಕಾರದ ಜೋಳ ಖರೀದಿ ಕೇಂದ್ರಗಳ ಮೂಲಕ ಮಾರಾಟ ಮಾಡಿದ ಜೋಳದ ಹಣ ಇನ್ನೂ ಪಾವತಿಯಾಗದೆ ಬಾಕಿ ಉಳಿದಿದೆ. ಬೆಳೆ ಬೆಳೆಸಲು ಸಾಲ ಮಾಡಿರುವ ರೈತರು ಹಣಕ್ಕಾಗಿ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಸರ್ಕಾರ ಯಾವುದೇ ವಿಳಂಬ ಮಾಡದೆ ರೈತರಿಗೆ ಬಾಕಿ ಇರುವ ಜೋಳದ ಹಣವನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ಜಿಲ್ಲೆಯಲ್ಲಿ ಮಳೆಯ ಕೊರತೆ ಹಾಗೂ ಕೃಷಿ ಚಟುವಟಿಕೆಗಳ ಮೇಲೆ ಉಂಟಾಗಿರುವ ಪರಿಣಾಮವನ್ನು ಗಂಭೀರವಾಗಿ ಪರಿಗಣಿಸಿ, ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಬೇಕು. ಬರದಿಂದ ಹಾನಿಗೊಳಗಾದ ರೈತರಿಗೆ ಸರ್ಕಾರ ಅಗತ್ಯ ಪರಿಹಾರ ಹಾಗೂ ನೆರವು ಕಲ್ಪಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ರೈತರ ನೀರಾವರಿ, ಬೆಳೆ ಖರೀದಿ ಹಣ ಹಾಗೂ ಬರ ಪರಿಹಾರದಂತಹ ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಪರಿಹರಿಸಿ, ಕೃಷಿಕರಿಗೆ ಅನುಕೂಲವಾಗುವ ಕ್ರಮಗಳನ್ನು ಸರ್ಕಾರ ಕೈಗೊಳ್ಳಬೇಕು ಎಂದು ರೈತ ಮೋರ್ಚಾ ಮುಖಂಡರು ಸಚಿವರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕುಮಾರ ಮೇದಾ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ರೈತ ಮೋರ್ಚಾ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕಾಡುಗೊಲ್ಲ ಅಭಿವೃದ್ಧಿ ನಿಗಮ: ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನ

ಕೊಪ್ಪಳ , (ಕರ್ನಾಟಕ ವಾರ್ತೆ): ಕರ್ನಾಟಕ ಕಾಡುಗೊಲ್ಲ ಅಭಿವೃದ್ಧಿ ನಿಗಮ ನಿಯಮಿತದಿಂದ 2026-27 ನೇ ಸಾಲಿನಲ್ಲಿ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಈ ಯೋಜನೆಗಳಡಿ ಸಹಾಯಧನ/ಸಾಲ-ಸಹಾಯಧನವನ್ನು ಪಡೆಯಲು ಅರ್ಹರಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ (ನೂತನ), ಅರಿವು ಶೈಕ್ಷಣಿಕ ಸಾಲ ಯೋಜನೆ (ನವೀಕರಣ), ಸ್ವಾವಲಂಬಿ ಸಾರಥಿ ಯೋಜನೆ, ಗಂಗಾಕಲ್ಯಾಣ ಯೋಜನೆ ( ಈ ಯೋಜನೆಯಲ್ಲಿ ದಕ್ಷಿಣ ಕನ್ನಡ, ಉಡುಪಿ, ಕೊಡಗು, ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು. ಇತರೇ ಜಿಲ್ಲೆಗಳಲ್ಲಿ ಕನಿಷ್ಠ 2 ಎಕರೆ ಜಮೀನು ಹೊಂದಿರಬೇಕು.), ಹೊಲಿಗೆ ಯಂತ್ರ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಅರ್ಹ ಫಲಾನುಭವಿಗಳು ಸೇವಾಸಿಂಧು ಪೋರ್ಟಲ್ ನಲ್ಲಿ ಸೆಪ್ಟೆಂಬರ್ 30 ರೊಳಗೆ ಅರ್ಜಿ ಸಲ್ಲಿಸಬೇಕು. ಅರಿವು/ಶಯಕ್ಷಣಿಕ ಸಾಲ ಯೋಜನೆಗಳಿಗೆ ಕೊನೆಯ ದಿನಾಂಕ ಇರುವುದಿಲ್ಲ.

ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಗಳಾಗಿರಬೇಕು. ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವವರು ಕಾಡುಗೊಲ್ಲ ಹಾಗೂ ಅದರ ಉಪಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ನಿಗಮದ/ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು. ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು.

ಅರಿವು ಯೋಜನೆಯಡಿ ಅಭ್ಯರ್ಥಿಯ ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು ವಾರ್ಷಿಕ ವರಮಾನದ ಮಿತಿ ರೂ. 3.50 ಲಕ್ಷಗಳು, ಸ್ವಾವಲಂಬಿ ಸಾರಥಿ ಯೋಜನೆಯಡಿ ವಯೋಮಿತಿ 21 ವರ್ಷಗಳಿಂದ 45 ವರ್ಷಗಳ ಮಿತಿಯಲ್ಲಿರಬೇಕು. ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆ ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ. 98,000/- ಮತ್ತು ನಗರ ಪ್ರದೇಶದವರಿಗೆ ರೂ. 1,20,000/- ಗಳ ಮಿತಿಯೊಳಗಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33 ರಷ್ಟು, ವಿಕಲಚೇತನರಿಗೆ ಶೇ.5 ರಷ್ಟು, ತೃತೀಯ ಲಿಂಗಿಗಳಿಗೆ ಶೇ. 1 ರಷ್ಟು ಮೀಸಲಾತಿ ಇರಿಸಿದೆ.

ಅರ್ಜಿ ಸಲ್ಲಿಸುವಾಗ ಆಧಾರ್ ಕಾರ್ಡಿನಲ್ಲಿರುವಂತೆ ಅರ್ಜಿದಾರರ ಹೆಸರು, ವಿಳಾಸ, ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳಲ್ಲಿನ ಹೆಸರು, ವಿಳಾಸ ಮತ್ತು ಬ್ಯಾಂಕ್ ಪಾಸ್ ಪುಸ್ತಕಗಳಲ್ಲಿನ ಹೆಸರು ಕಡ್ಡಾಯವಾಗಿ ತಾಳೆಯಾಗಬೇಕು. ಬೆಂಗಳೂರು-ಒನ್/ಕರ್ನಾಟಕ-ಒನ್/ಅಟಲ್-ಜಿ ಜನಸ್ನೇಹಿ ಕೇಂದ್ರ ಮತ್ತು ನಾಗರಿಕ ಸೇವಾ ಕೇಂದ್ರಗಳಲ್ಲಿ ಆನ್ ಲೈನ್ ಮೂಲಕ ಸೇವಾಸಿಂಧು ಪೋರ್ಟಲ್ ನಡಿ ಅರ್ಜಿಯನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಯನ್ನು ನಿಗಮದ ಕೇಂದ್ರ ಕಛೇರಿ ದೂರವಾಣಿ ಸಂಖ್ಯೆ: 080-22374832/833 ಯಿಂದ ಪಡೆಯಬಹುದಾಗಿದೆ. ಹಾಗೂ ಜಿಲ್ಲೆಗಳಲ್ಲಿ ನಿಗಮದ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ದಿ ನಿಗಮದ ಕಛೇರಿಗಳಲ್ಲಿ ಬೆಳಗ್ಗೆ 10 ರಿಂದ ಸಂಜೆ 5:30 ರವರೆಗೆ ಸಂಪರ್ಕಿಸಬಹುದಾಗಿದೆ.

2024-25 ಮತ್ತು 2025-26 ನೇ ಸಾಲುಗಳಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಅರ್ಜಿದಾರರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ ಎಂದು ನಿಗಮದ ಪ್ರಕಟಣೆ ತಿಳಿಸಿದೆ.

# ನನ್ನಪ್ಪ ಒಂದು ಅದ್ಭುತ

ಅಪ್ಪ ಈ ಎರಡು ಅಕ್ಷರಗಳಲ್ಲಿ ಕೇವಲ ಒಂದು ಸಂಬಂಧವಿಲ್ಲ,ನನ್ನ ಇಡೀ ಬದುಕಿನ ಭದ್ರತೆ, ಭರವಸೆ, ಧೈರ್ಯ, ತ್ಯಾಗ ಮತ್ತು ಪ್ರೀತಿಯ ಅಪಾರ ಜಗತ್ತೇ ಅಡಗಿದೆ. ಅಪ್ಪ ಎಂಬ ಹೆಸರನ್ನು ಉಚ್ಚರಿಸಿದಾಗ ನನ್ನ ಕಣ್ಣ ಮುಂದೆ ಮೂಡುವುದು ಅವರ ಮುಖ ಮಾತ್ರವಲ್ಲ,

ನನ್ನ ಬದುಕಿನ ಪ್ರತಿಯೊಂದು ಕಷ್ಟದ ಸಂದರ್ಭದಲ್ಲಿ ಬೆನ್ನಿಗೆ ನಿಂತ ಆ ಗಟ್ಟಿಯಾದ ನೆರಳು..

ಅಪ್ಪನ ಪ್ರೀತಿ ಎಂದಿಗೂ ಪ್ರದರ್ಶನದ ವಸ್ತುವಾಗಿರಲಿಲ್ಲ. ಅದು ಮೌನದ ಭಾಷೆಯಲ್ಲಿ ಮಾತನಾಡುವ ಪ್ರೀತಿ. ಅವರ ಮಾತುಗಳಲ್ಲಿ ಪ್ರೀತಿ ಕಡಿಮೆಯಿದ್ದರೂ, ಅವರ ಪ್ರತಿಯೊಂದು ನಡೆ-ನುಡಿಯಲ್ಲಿ ಕಾಳಜಿಯ ಸಾಗರವಿತ್ತು. ನಾನು ಕೇಳುವ ಮೊದಲೇ ನನ್ನ ಅಗತ್ಯವನ್ನು ಅರಿತುಕೊಂಡವರು ಅವರು. ನಾನು ಹೇಳುವ ಮೊದಲೇ ನನ್ನ ನೋವನ್ನು ಗ್ರಹಿಸಿದವರು ಅವರು. ನನ್ನ ಸಂತೋಷಕ್ಕಾಗಿ ತಮ್ಮ ಸಂತೋಷವನ್ನು ಬದಿಗಿಟ್ಟು, ನನ್ನ ಬದುಕು ಸುಂದರವಾಗಲಿ ಎಂಬ ಒಂದೇ ಕಾರಣಕ್ಕಾಗಿ ತಮ್ಮ ಬದುಕಿನ ಅನೇಕ ಸುಖಗಳನ್ನು ತ್ಯಾಗ ಮಾಡಿದವರು ಅವರು..

ಅವರ ಕೈಯಲ್ಲಿ ಬೆಳೆದ ನನ್ನ ಬಾಲ್ಯಕ್ಕೆ ಆಗ ಅದರ ಬೆಲೆ ತಿಳಿದಿರಲಿಲ್ಲ. ಅವರ ಕೈ ಹಿಡಿದು ನಡೆದಾಗ, ಅದು ಕೇವಲ ಒಂದು ಕೈ ಎಂದುಕೊಂಡಿದ್ದೆ. ಆದರೆ ಇಂದು ಜೀವನದ ಕಠಿಣ ದಾರಿಯಲ್ಲಿ ಒಬ್ಬಳೇ ಹೆಜ್ಜೆ ಇಡುತ್ತಿರುವಾಗ ಅರ್ಥವಾಗುತ್ತಿದೆಅದು ನನ್ನ ಕೈ ಹಿಡಿದ ಕೈಯಲ್ಲ, ನನ್ನ ಬದುಕು ಕುಸಿಯದಂತೆ ಹಿಡಿದಿಟ್ಟಿದ್ದ ಒಂದು ಬಲಿಷ್ಠ ಆಧಾರ..

ಅಪ್ಪನ ಗದರಿಕೆಯು ಆಗ ಕಠಿಣವಾಗಿ ಅನಿಸುತ್ತಿತ್ತು. ಇಂದು ಅದೇ ಗದರಿಕೆಯ ಹಿಂದೆ ಅಡಗಿದ್ದ ಪ್ರೀತಿಯ ಆಳ ಅರ್ಥವಾಗುತ್ತಿದೆ. ಅವರ ಕೋಪದ ಹಿಂದೆ ನನ್ನ ಭವಿಷ್ಯದ ಕಾಳಜಿಯಿತ್ತು. ಅವರ ಮೌನದ ಹಿಂದೆ ಸಾವಿರ ಮಾತುಗಳಿದ್ದವು. ಅವರ ತ್ಯಾಗದ ಹಿಂದೆ ನನ್ನ ಭವಿಷ್ಯದ ಕನಸಿತ್ತು..

ನಾನು ಸೋತಾಗ ನನ್ನನ್ನು ಸೋತವಳಾಗಿ ನೋಡಲಿಲ್ಲ ಅಪ್ಪ. ನನ್ನೊಳಗೆ ಇನ್ನೂ ಗೆಲ್ಲುವ ಶಕ್ತಿ ಇದೆ ಎಂದು ನಂಬಿದರು. ನಾನು ಕುಗ್ಗಿದಾಗ ಎದ್ದು ನಿಲ್ಲುವ ಧೈರ್ಯ ತುಂಬಿದರು. ನಾನು ದಾರಿ ತಪ್ಪಿದಾಗ ಸರಿಯಾದ ದಾರಿ ತೋರಿಸಿದರು. ಜಗತ್ತು ನನ್ನ ಸಾಮರ್ಥ್ಯವನ್ನು ಪ್ರಶ್ನಿಸಿದಾಗ, "ನನ್ನ ಮಗಳು ಮಾಡಬಲ್ಲಳು" ಎಂಬ ನಂಬಿಕೆಯಿಂದ ನನ್ನ ಬೆನ್ನಿಗೆ ನಿಂತವರು ನನ್ನಪ್ಪ...



ನನ್ನ ಪ್ರತಿಯೊಂದು ಗೆಲುವಿನ ಹಿಂದೆ ನನ್ನ ಪರಿಶ್ರಮವಿದ್ದರೆ, ಅದರ ಹಿಂದೆ ನನ್ನಪ್ಪನ ತ್ಯಾಗವಿದೆ. ನಾನು ಒಂದೊಂದು ಹೆಜ್ಜೆ ಮುಂದೆ ಇಡಲು ಅವರು ತಮ್ಮ ಬದುಕಿನಲ್ಲಿ ನೂರಾರು ಹೆಜ್ಜೆಗಳನ್ನು ಹಿಂದೆ ಸರಿದಿದ್ದಾರೆ. ನನ್ನ ಕನಸುಗಳು ನನಸಾಗಲಿ ಎಂದು ತಮ್ಮ ಅನೇಕ ಕನಸುಗಳನ್ನು ಮಣ್ಣಿನಡಿಯಲ್ಲಿ ಹೂತಿದ್ದಾರೆ..

ನಮ್ಮ ಬದುಕಿನ ಅರಮನೆಗೆ ಅವರು ಅಡಿಪಾಯವಾದರು,

ಆದರೆ ಆ ಅರಮನೆಯ ಮೇಲಿನ ತಮ್ಮ ಹೆಸರನ್ನು ಎಂದಿಗೂ ಬರೆಸಿಕೊಳ್ಳಲಿಲ್ಲ..

ನಮ್ಮ ಅಗತ್ಯಗಳನ್ನು ಪೂರೈಸುತ್ತಾ ತಮ್ಮ ಆಸೆಗಳನ್ನು ಮರೆತವರು. ನಮ್ಮ ಮುಖದಲ್ಲಿ ನಗು ಮೂಡಿಸಲು ತಮ್ಮ ನೋವನ್ನು ನುಂಗಿದವರು. ನಾವು ನೆಮ್ಮದಿಯಾಗಿ ಮಲಗಲು ತಮ್ಮ ನಿದ್ರೆಯನ್ನು ಕಳೆದುಕೊಂಡವರು. ನಾವು ಬೆಳಕಿನಲ್ಲಿ ನಡೆಯಲು ತಮ್ಮ ಬದುಕಿನ ಕತ್ತಲೆಯನ್ನು ಸಹಿಸಿಕೊಂಡವರು ನನ್ನ ಅಪ್ಪ..

ವಚನಕಾರರ ಮಾತಿನ ಸಾರ...

"ದೇಹವೇ ದೇಗುಲ, ಬದುಕೇ ಸಾಧನೆ,

ಪ್ರೀತಿಯೇ ಪೂಜೆ, ತ್ಯಾಗವೇ ಶಿವತ್ವ." ಅಪ್ಪನ ಬದುಕನ್ನು ನೋಡಿದಾಗ ಈ ಮಾತಿನ ಅರ್ಥ ಮತ್ತಷ್ಟು ಆಳವಾಗಿ ಅರಿವಾಗುತ್ತದೆ. ಅವರು ದೇವರನ್ನು ಹುಡುಕಲು ದೂರದ ದೇಗುಲಗಳಿಗೆ ಹೋಗಲಿಲ್ಲ; ತಮ್ಮ ಮಕ್ಕಳ ಬದುಕನ್ನು ಕಟ್ಟುವುದನ್ನೇ ಒಂದು ಆರಾಧನೆಯನ್ನಾಗಿ ಮಾಡಿಕೊಂಡರು. ತಮ್ಮ ಬೆವರನ್ನೇ ಪೂಜೆಯನ್ನಾಗಿ, ತಮ್ಮ ಶ್ರಮವನ್ನೇ ಸಾಧನೆಯನ್ನಾಗಿ, ತಮ್ಮ ತ್ಯಾಗವನ್ನೇ ನಮ್ಮ ಭವಿಷ್ಯದ ಬೆಳಕನ್ನಾಗಿ ಮಾಡಿದರು.

ಅಪ್ಪ ಎಂದರೆ ಕೇವಲ ಕುಟುಂಬದ ಯಜಮಾನನಲ್ಲ.
ಅಪ್ಪ ಎಂದರೆ ಮನೆಯ ಮೌನದ ಯೋಧ.
ಅಪ್ಪ ಎಂದರೆ ಸಂಕಷ್ಟದ ಎದುರು ಕುಗ್ಗದ ಗೋಡೆ.
ಅಪ್ಪ ಎಂದರೆ ನಮ್ಮ ಕನಸುಗಳಿಗೆ ರೆಕ್ಕೆ ನೀಡುವ ಆಕಾಶ.

ಅಪ್ಪ ಎಂದರೆ ನಾವು ಬೀಳುವ ಮುನ್ನವೇ ಹಿಡಿದುಕೊಳ್ಳುವ ಬಲವಾದ ಕೈ.

ಅಪ್ಪ ಎಂದರೆ ನಮ್ಮ ಸೋಲಿನಲ್ಲೂ ಗೆಲುವನ್ನು ಹುಡುಕುವ ಅಚಲ ನಂಬಿಕೆ...

ತಾಯಿಯ ಪ್ರೀತಿ ಕಣ್ಣಿಗೆ ಕಾಣುವ ಮಳೆಯಾದರೆ, ಅಪ್ಪನ ಪ್ರೀತಿ ಕಾಣದ ಮೋಡದಂತೆ. ಅದು ಯಾವಾಗ ಸುರಿಯುತ್ತದೆ ಎಂಬುದು ತಿಳಿಯುವುದಿಲ್ಲ; ಆದರೆ ನಮ್ಮ ಬದುಕಿನ ನೆಲ ಒಣಗದಂತೆ ಕಾಪಾಡುತ್ತದೆ.

ಅಪ್ಪ ತನ್ನ ನೋವನ್ನು ಹೇಳಿಕೊಳ್ಳುವುದಿಲ್ಲ. ತನ್ನ ಕಣ್ಣೀರನ್ನು ತೋರಿಸುವುದಿಲ್ಲ. ತನ್ನ ದಣಿವನ್ನು ಪ್ರಕಟಿಸುವುದಿಲ್ಲ. ಕುಟುಂಬದ ಮುಂದೆ ಸದಾ ಗಟ್ಟಿಯಾಗಿ ನಿಲ್ಲುತ್ತಾನೆ. ಆದರೆ ಆ ಗಟ್ಟಿತನದ ಒಳಗೆ, ಮಕ್ಕಳಿಗಾಗಿ ಮೃದುವಾಗಿ ಮಿಡಿಯುವ ಒಂದು ಹೃದಯ ಇರುತ್ತದೆ.

ಅಪ್ಪನ ಬೆವರು ಒಣಗಿದ ಜಾಗದಲ್ಲೇ
ಮಕ್ಕಳ ಭವಿಷ್ಯ ಮೊಳಕೆಯೊಡೆಯುತ್ತದೆ.
ಅಪ್ಪನ ಕನಸುಗಳು ಮೌನವಾದಾಗಲೇ
ಮಕ್ಕಳ ಕನಸುಗಳಿಗೆ ಧ್ವನಿ ಸಿಗುತ್ತದೆ.

ಅಪ್ಪ ಎಂಬ ಪದವನ್ನು ಬರೆಯಲು ಎರಡು ಅಕ್ಷರಗಳು ಸಾಕು. ಆದರೆ ಆ ಎರಡು ಅಕ್ಷರಗಳ ಆಳವನ್ನು ಅರ್ಥಮಾಡಿಕೊಳ್ಳಲು ಒಂದು ಜೀವನವೂ ಸಾಲದು.

ಒಂದು ದಿನ ನಾನು ಎಷ್ಟೇ ಎತ್ತರಕ್ಕೆ ಬೆಳೆದರೂ, ಎಷ್ಟೇ ದೂರ ಸಾಗಿದರೂ, ನನ್ನ ಮನಸ್ಸು ಮತ್ತೆ ಮತ್ತೆ ಹುಡುಕುವುದು ಆ ಪರಿಚಿತವಾದ ನೆರಳೇನನ್ನಪ್ಪನ ನೆರಳು...

ಅವರ ಕನಸುಗಳನ್ನು ನನಸಾಗಿಸುವುದು ನನ್ನ ದೊಡ್ಡ ಜವಾಬ್ದಾರಿ. ಅವರಿಗೆ ನಾನು ಕೊಡಬಹುದಾದ ದೊಡ್ಡ ಉಡುಗೊರೆ ಹಣವಲ್ಲ, ದುಬಾರಿ ವಸ್ತುವಲ್ಲ. ಅವರು ಹೆಮ್ಮೆಪಡುವಂತೆ ಬದುಕುವುದು, ಅವರ ತ್ಯಾಗಕ್ಕೆ ಅರ್ಥ ಬರುವಂತೆ ಬದುಕುವುದುಅದೇ ನಾನು ಅವರಿಗೆ ನೀಡಬಹುದಾದ ಅತ್ಯಮೂಲ್ಯ ಕಾಣಿಕೆ..

ನನ್ನಪ್ಪನಿಗೆ ನಾನು ಎಷ್ಟೇ ಧನ್ಯವಾದಗಳನ್ನು ಹೇಳಿದರೂ ಅದು ಕಡಿಮೆಯೇ. ಅವರು ನನ್ನ ಬದುಕಿಗಾಗಿ ಮಾಡಿದ ಪ್ರತಿಯೊಂದು ತ್ಯಾಗಕ್ಕೂ ಪ್ರತಿಯಾಗಿ ಕೊಡುವಷ್ಟು ದೊಡ್ಡ ಉಡುಗೊರೆ ನನ್ನ ಬಳಿ ಇಲ್ಲ. ನನ್ನ ಪ್ರೀತಿ, ನನ್ನ ಗೌರವ, ನನ್ನ ಸಾಧನೆ ಮತ್ತು ಅವರ ಮುಖದಲ್ಲಿ ಮೂಡುವ ಆ ಒಂದು ಸಣ್ಣ ನಗುಇವೇ ನನ್ನಿಂದ ಅವರಿಗೆ ನೀಡಬಹುದಾದ ಅಮೂಲ್ಯ ಕಾಣಿಕೆಗಳು.

ಅಪ್ಪ ನನ್ನ ಬದುಕಿನ ಒಂದು ಅಧ್ಯಾಯವಲ್ಲ,ನನ್ನ ಇಡೀ ಬದುಕಿನ ಅರ್ಥ..

ಅಪ್ಪ ನನ್ನ ಕಥೆಯ ಒಂದು ಪಾತ್ರವಲ್ಲ,
ಆ ಕಥೆಯನ್ನು ಬರೆಯಲು ತನ್ನ ಬದುಕನ್ನೇ
ಶಾಯಿಯನ್ನಾಗಿ ಮಾಡಿಕೊಂಡ ಮಹಾನ್ ವ್ಯಕ್ತಿ..
ಅಪ್ಪ ನನ್ನ ನೆರಳಲ್ಲ,
ನನ್ನ ನೆರಳಿಗೂ ನೆರಳಾದವರು..

ಅವರ ಋಣ ತೀರಿಸಲಾಗದು.
ಅವರ ತ್ಯಾಗಕ್ಕೆ ಬೆಲೆ ಕಟ್ಟಲಾಗದು.
ಅವರ ಪ್ರೀತಿಯನ್ನು ಅಳೆಯಲಾಗದು.
ಆದ್ದರಿಂದ ನನ್ನಪ್ಪನಿಗೆ ಶತಕೋಟಿ ಧನ್ಯವಾದಗಳನ್ನು
ಅರ್ಪಿಸುತ್ತಾ, ಅವರ ಪಾದಗಳಿಗೆ ನನ್ನ ಪ್ರೀತಿ, ಗೌರವ
ಮತ್ತು ಕೃತಜ್ಞತೆಯನ್ನು ಸಮರ್ಪಿಸುತ್ತೇನೆ.

ಅಪ್ಪ ಎಂದರೆ

ಅಪ್ಪ ಎಂದರೆ ನೆರಳಲ್ಲ,
ಬಿಸಿಲಿಗೆ ನಿಂತ ಮರ,
ನಾವು ನಗುವ ಕ್ಷಣಕ್ಕಾಗಿ
ತನ್ನ ನೋವಿಗೆ ಹಾಕಿದ ಪದರ..

ಮಾತು ಕಡಿಮೆ ಆಡಿದರೂ,
ಕಾಳಜಿ ತುಂಬಿತ್ತು ಕಣ್ಣಲ್ಲಿ,
ನನ್ನ ಕನಸು ಕಾಣುವ ಮುನ್ನವೇ
ಕನಸು ಕಟ್ಟಿದನು ತನ್ನ ಮನದಲ್ಲಿ..

ನನ್ನ ಹೆಜ್ಜೆ ತಡವರಿಸಿದಾಗ
ಧೈರ್ಯವಾಗಿ ಕೈ ಹಿಡಿದವರು,
ನಾನು ಗೆದ್ದ ಕ್ಷಣಕ್ಕಿಂತ
ನನ್ನ ಗೆಲುವಿಗಾಗಿ ಬದುಕಿದವರು..

ತನ್ನ ಆಸೆಗಳನ್ನು ಮರೆತು,
ನನ್ನ ಆಸೆಗಳಿಗೆ ಜೀವ ತುಂಬಿದವರು,
ತನ್ನ ಬದುಕನ್ನು ತ್ಯಾಗ ಮಾಡಿ,
ನನ್ನ ಬದುಕನ್ನು ಸುಂದರಗೊಳಿಸಿದವರು..

ಅಪ್ಪ ಎಂದರೆ ದೇವರಲ್ಲ,
ಆದರೆ ದೇವರ ಕರುಣೆಯ ರೂಪ,
ಅಪ್ಪ ಎಂದರೆ ... ಮನುಷ್ಯನಲ್ಲ,
ನಮ್ಮ ... ಬದುಕಿನೊಳಗೆ
ಬದುಕುವ ... ಅದ್ಭುತ...



ಕಾವ್ಯ ರಾಯಚೂರು

ತುಂಗ ಬಿಂಬ

# ದೇಶ ನಿರ್ಮಾಣ ಹಾಗೂ ಸಮಾನತೆಯ ಸಂವಿಧಾನ ಜಾರಿಗೆ ಕಾಂಗ್ರೆಸ್ ಕೊಡುಗೆ ಅಪಾರ: ಡಾ. ಯತೀಂದ್ರ ಸಿದ್ದರಾಮಯ್ಯ



ರಾಯಚೂರು: ದೇಶದಲ್ಲಿ ಮೂಲಭೂತ ಸೌಕರ್ಯಗಳ ಕೊರತೆ, ಸಾಮಾಜಿಕ ಅಸಮಾನತೆ ಮತ್ತು ಅನೇಕ ಸವಾಲುಗಳು ಎದುರಾಗಿದ್ದ ಕಠಿಣ ಕಾಲದಲ್ಲಿಯೂ ದೃಢಸಂಕಲ್ಪದಿಂದ ದೇಶ ನಿರ್ಮಾಣಕ್ಕೆ ಶ್ರಮಿಸಿದ ಹಾಗೂ ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಪ್ರಜಾಸತ್ತಾತ್ಮಕ ಮೌಲ್ಯಗಳಿಗೆ ದಾರಿದೀಪವಾದ ಸಂವಿಧಾನವನ್ನು ಜನತೆಗೆ ನೀಡಿದ ಮಹತ್ತರ ಹಿರಿಮೆ ಕಾಂಗ್ರೆಸ್ ಪಕ್ಷಕ್ಕೆ ಸಲ್ಲುತ್ತದೆ ಎಂದು ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಗೆ ಭೇಟಿ ನೀಡಿದ ಅವರು, ಪಕ್ಷದ ಹಿರಿಯ ಮುಖಂಡರು, ಜನಪ್ರತಿನಿಧಿಗಳು ಹಾಗೂ ಕಾರ್ಯಕರ್ತರೊಂದಿಗೆ ಹಮ್ಮಿಕೊಳ್ಳಲಾಗಿದ್ದ ಮಹತ್ವದ ಸಭೆಯಲ್ಲಿ ಮಾತನಾಡಿದರು.

ಸ್ವಾತಂತ್ರ್ಯಾನಂತರದ ಭಾರತ ಅನೇಕ ಸವಾಲುಗಳನ್ನು ಎದುರಿಸುತ್ತಿದ್ದ ಸಂದರ್ಭದಲ್ಲಿ ದೇಶದ ಪುನರ್‌ನಿರ್ಮಾಣ, ಸಾಮಾಜಿಕ ಸಮಾನತೆ, ಶಿಕ್ಷಣ, ಆರೋಗ್ಯ, ಆಡಳಿತ ಮತ್ತು ಮೂಲಭೂತ ಅಭಿವೃದ್ಧಿಗೆ ಬುನಾದಿ ಹಾಕುವ ಕೆಲಸವನ್ನು ಕಾಂಗ್ರೆಸ್ ಮಾಡಿದೆ. ಶತಮಾನಗಳಿಂದ ಸಮಾಜದಲ್ಲಿ ಬೇರೂರಿದ್ದ ಅಸಮಾನತೆಯ ವ್ಯವಸ್ಥೆಯನ್ನು ಸಂವಿಧಾನದ ಮೌಲ್ಯಗಳ ಮೂಲಕ ನಿವಾರಿಸುವ ದಿಕ್ಕಿನಲ್ಲಿ ಪಕ್ಷ ಮಹತ್ವದ ಪಾತ್ರ ವಹಿಸಿದೆ ಎಂದು ತಿಳಿಸಿದರು.

ಸಂವಿಧಾನವು ದೇಶದ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಹಕ್ಕು, ಅವಕಾಶ ಮತ್ತು ಗೌರವದ ಬದುಕಿನ ಭರವಸೆ ನೀಡಿದೆ. ಸಾಮಾಜಿಕವಾಗಿ ಹಿಂದುಳಿದ, ಶೋಷಿತ ಹಾಗೂ ಅವಕಾಶ ವಂಚಿತ ವರ್ಗಗಳಿಗೆ ನ್ಯಾಯ ಒದಗಿಸುವ ದಿಕ್ಕಿನಲ್ಲಿ ಸಂವಿಧಾನಾತ್ಮಕ ವ್ಯವಸ್ಥೆ ಮಹತ್ವದ ಸಾಧನವಾಗಿದೆ. ಇಂತಹ ತತ್ವ ಮತ್ತು ಮೌಲ್ಯಗಳನ್ನು ಅಳವಡಿಸಿಕೊಂಡಿರುವ ಪಕ್ಷದ ಕಾರ್ಯಕರ್ತರಾಗಿರುವುದಕ್ಕೆ ನಮಗೆಲ್ಲ ಹೆಮ್ಮೆ ಇದೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷವು ಕೇವಲ ರಾಜಕೀಯ ಅಧಿಕಾರಕ್ಕಾಗಿ ಕಾರ್ಯನಿರ್ವಹಿಸುವ ಸಂಘಟನೆ ಅಲ್ಲ. ದೇಶದ ಏಕತೆ, ಅಖಂಡತೆ, ಸಾಮಾಜಿಕ ನ್ಯಾಯ, ಧರ್ಮನಿರಪೇಕ್ಷತೆ ಮತ್ತು ಜನಪರ ಆಡಳಿತದ ತತ್ವಗಳನ್ನು ಮುಂದಿಟ್ಟುಕೊಂಡು ಹೋರಾಟ ನಡೆಸಿದ ಐತಿಹಾಸಿಕ ಪರಂಪರೆ ಹೊಂದಿದೆ. ಈ ಪರಂಪರೆಯನ್ನು ಮುಂದಿನ ಪೀಳಿಗೆಗೂ ತಲುಪಿಸುವ ಜವಾಬ್ದಾರಿ ಪ್ರತಿಯೊಬ್ಬ ಕಾರ್ಯಕರ್ತರ ಮೇಲಿದೆ ಎಂದು ಹೇಳಿದರು.

ದೇಶವನ್ನು ಒಗ್ಗೂಡಿಸುವ ಹಾಗೂ ಜನರ ಸಮಸ್ಯೆಗಳಿಗೆ ಧ್ವನಿಯಾಗುವ ಉದ್ದೇಶದಿಂದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ನಡೆಸಿದ ಐತಿಹಾಸಿಕ ಭಾರತ್ ಜೋಡೋ ಪಾದಯಾತ್ರೆ ದೇಶದ ರಾಜಕೀಯ ಇತಿಹಾಸದಲ್ಲಿ ಮಹತ್ವದ ಘಟನೆವಾಗಿದೆ. ವಿಭಿನ್ನ ಭಾಷೆ, ಧರ್ಮ, ಜಾತಿ ಮತ್ತು ಸಂಸ್ಕೃತಿಗಳನ್ನು ಹೊಂದಿರುವ ಜನರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಸಂದೇಶವನ್ನು ಈ ಪಾದಯಾತ್ರೆ ನೀಡಿದೆ ಎಂದು ಹೇಳಿದರು.

ರಾಹುಲ್ ಗಾಂಧಿ ಅವರಂತಹ ದೂರದೃಷ್ಟಿಯುಳ್ಳ ನಾಯಕತ್ವ ಕಾಂಗ್ರೆಸ್ ಪಕ್ಷಕ್ಕೆ ಲಭಿಸಿರುವುದು ಕಾರ್ಯಕರ್ತರಿಗೆ ಶಕ್ತಿ ತುಂಬುವಂತಾಗಿದೆ. ಜನರ ನಡುವೆ ನೇರವಾಗಿ ಹೋಗಿ ಅವರ ಸಮಸ್ಯೆ, ನೋವು ಮತ್ತು ಆಶಯಗಳನ್ನು ಆಲಿಸುವ ರಾಜಕೀಯ ಸಂಸ್ಕೃತಿಯನ್ನು ಅವರು ಬಲಪಡಿಸಿದ್ದಾರೆ ಎಂದು ತಿಳಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಜನಪರ ಕಾರ್ಯಕ್ರಮಗಳಿಗೆ ಆದ್ಯತೆ ನೀಡುತ್ತಿದೆ. ವಿಶೇಷವಾಗಿ ಗ್ಯಾರಂಟಿ ಯೋಜನೆಗಳ ಮೂಲಕ ಸಾಮಾನ್ಯ ಜನರ ಆರ್ಥಿಕ ಬದುಕಿಗೆ ನೆರವಾಗುವ ಪ್ರಯತ್ನ ಮಾಡಲಾಗುತ್ತಿದೆ. ಯುವಜನತೆಯಲ್ಲಿ ಹೊಸ ಚೈತನ್ಯ, ಸಾಮಾಜಿಕ ಜವಾಬ್ದಾರಿ ಮತ್ತು ಸಂವಿಧಾನಾತ್ಮಕ ಮೌಲ್ಯಗಳ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಭಾರತ್ ಜೋಡೋ ಸಂಘಗಳನ್ನು ರಚಿಸಿ ಸಂಘಟನೆಯನ್ನು ಬಲಪಡಿಸಲಾಗುತ್ತಿದೆ ಎಂದು ಹೇಳಿದರು.

ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ರಾಜಕೀಯ ಮತ್ತು ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಸಂವಿಧಾನದ ಆಶಯಗಳನ್ನು ಅರಿತುಕೊಂಡು ಸಮಾಜದಲ್ಲಿ ಸೌಹಾರ್ದತೆ, ಸಮಾನತೆ ಹಾಗೂ ಜನಪರ ಚಿಂತನೆಗಳನ್ನು ಬೆಳೆಸಬೇಕು. ಪಕ್ಷದ ಕಾರ್ಯಕರ್ತರು ಸರ್ಕಾರದ ಯೋಜನೆಗಳು ಮತ್ತು ಜನಪರ ಕಾರ್ಯಕ್ರಮಗಳನ್ನು ಮನೆಮನೆಗೆ ತಲುಪಿಸುವ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಪಕ್ಷದ ಹಿರಿಯರ ಅನುಭವ ಹಾಗೂ ಯುವ ಕಾರ್ಯಕರ್ತರ ಉತ್ಸಾಹವನ್ನು ಸಮನ್ವಯಗೊಳಿಸಿದಾಗ ಮಾತ್ರ ಸಂಘಟನೆ ಇನ್ನಷ್ಟು ಬಲಿಷ್ಠವಾಗುತ್ತದೆ. ಗ್ರಾಮ, ವಾರ್ಡ್ ಮತ್ತು ಬೂತ್ ಮಟ್ಟದಲ್ಲಿ ಕಾರ್ಯಕರ್ತರು ಸಕ್ರಿಯರಾಗಿ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಜನರ ವಿಶ್ವಾಸವನ್ನು ಉಳಿಸಿಕೊಳ್ಳುವ ಮೂಲಕ ಪಕ್ಷದ ತತ್ವ ಮತ್ತು ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜನರ ಮುಂದೆ ತೆಗೆದುಕೊಂಡು ಹೋಗಬೇಕು ಎಂದು ಸಚಿವರು ಹೇಳಿದರು.

ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ಡಿ.ಟಿ. ಶ್ರೀನಿವಾಸ್, ಮಾಜಿ ಸಚಿವ ಎನ್. ಎಸ್. ಬೋಸರಾಜು, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ರಾಜಶೇಖರ್ ರಾಮಸ್ವಾಮಿ, ಹಿಂದುಳಿದ ವರ್ಗಗಳ ಅಧ್ಯಕ್ಷ ಕೆ. ಶಾಂತಪ್ಪ, ಕೆಪಿಸಿಸಿ ಜಿಲ್ಲಾ ಅಧ್ಯಕ್ಷ ಬಸವರಾಜ ಪಾಟೀಲ ಇಟಿಗಿ, ಮುಖಂಡ ಮೊಹಮ್ಮದ್ ಶಾಲಾನ್ ಸೇರಿದಂತೆ ಪ್ರಮುಖ ಜನಪ್ರತಿನಿಧಿಗಳು, ಹಿರಿಯ ನಾಯಕರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಇಷ್ಟಲಿಂಗ ಧಾರಣೆ ವೀರಶೈವ ಲಿಂಗಾಯತ ಧರ್ಮದ ಮಹತ್ವದ ಪರಂಪರೆ: ಶ್ರೀ ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿ



ರಾಯಚೂರು, ಸೆ.6: ವೀರಶೈವ ಲಿಂಗಾಯತ ಧರ್ಮದಲ್ಲಿ ಇಷ್ಟಲಿಂಗಕ್ಕೆ ಅತ್ಯಂತ ಮಹತ್ವದ ಸ್ಥಾನವಿದ್ದು, ಜನನದಿಂದ ಮರಣದವರೆಗೂ ಇಷ್ಟಲಿಂಗ ಧರಿಸುವ ಪರಂಪರೆ ಅನುಸರಿಸಲಾಗುತ್ತಿದೆ. ಇಷ್ಟಲಿಂಗ ಪೂಜೆ ಕೇವಲ ಧಾರ್ಮಿಕ ಆಚರಣೆ ಮಾತ್ರವಲ್ಲ, ಅದು ಜೀವನದಲ್ಲಿ ಶಿಸ್ತು, ಭಕ್ತಿ, ಸಂಸ್ಕಾರ ಮತ್ತು ಆತ್ಮಸಾಕ್ಷಾತ್ಕಾರದ ಮಾರ್ಗವನ್ನು ತೋರಿಸುವ ಸಾಧನೆಯಾಗಿದೆ ಎಂದು ಕಿಲ್ಲೇಬೃಹನ್ಮಠದ ಪೀಠಾಧಿಪತಿ ಪೂಜ್ಯ ಶ್ರೀ ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ನಗರದ ಕಿಲ್ಲೇಬೃಹನ್ಮಠದಲ್ಲಿ ಶ್ರಾವಣ ಮಾಸದ ಅಂಗವಾಗಿ ಶ್ರೀಗಳ ದಿವ್ಯ ಸಾನಿಧ್ಯದಲ್ಲಿ ಅಯ್ಯಾಚಾರ ಇಷ್ಟಲಿಂಗ ದೀಕ್ಷಾ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಹಮ್ಮಿಕೊಳ್ಳಲಾಗಿತ್ತು. ವಿವಿಧ ಪೂಜಾ ವಿಧಿವಿಧಾನಗಳೊಂದಿಗೆ ನಡೆದ ಕಾರ್ಯಕ್ರಮದಲ್ಲಿ ಜಂಗಮ ವಟುಗಳು, ಹಿರಿಯರು, ಶ್ರೀಮಠದ ಭಕ್ತರು ಹಾಗೂ ಮಹಿಳೆಯರು ಭಾಗವಹಿಸಿದ್ದರು.

ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆಯಿಂದಲೇ ಗಣೇಶ ಪೂಜೆ, ಶಿವ-ಪಾರ್ವತಿ ಪೂಜೆ, ಅಷ್ಟದುರ್ಗೆಯರ ಪೂಜೆ, ಜಗದ್ಗುರು ಪಂಚಾಚಾರ್ಯರ ಪೂಜೆ ಹಾಗೂ ಶ್ರೀಮಠದ ಹಿರಿಯ ಶ್ರೀಗಳ ಗದ್ದುಗೆಗಳಿಗೆ ವಿಶೇಷ ಪೂಜೆ, ಅಭಿಷೇಕ ಮತ್ತು ಮಹಾಮಂಗಳಾರತಿ ನೆರವೇರಿಸಲಾಯಿತು. ಅಯ್ಯಾಚಾರ ವಟುಗಳಿಂದ ವೇ.ಮೂ. ಶರಣಯ್ಯ ಸ್ವಾಮಿ ಜಾಗೀರವೆಂಕಟಾಪುರ, ಪ್ರಭು ಹಿರೇಮಠ, ಮಹೇಶ ಹಿರೇಮಠ ಸೇರಿದಂತೆ ಪುರೋಹಿತ ವೃಂದದವರು ವಿವಿಧ ಪೂಜಾ ಕೈಂಕರ್ಯಗಳನ್ನು ಶಾಸ್ತ್ರೋಕ್ತವಾಗಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಸುಮಾರು ಆರು ಮಂದಿ ಜಂಗಮ ವಟುಗಳಿಗೆ ಹಾಗೂ ಐದು ಮಂದಿ ಹಿರಿಯರಿಗೆ ಪೂಜ್ಯ ಶ್ರೀ ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿ ಇಷ್ಟಲಿಂಗ ದೀಕ್ಷೆಯನ್ನು ನೀಡಿದರು. ದೀಕ್ಷೆಯ ವಿಧಿವಿಧಾನಗಳನ್ನು ವಿವರಿಸುವುದರ ಜೊತೆಗೆ ಇಷ್ಟಲಿಂಗ ಧಾರಣೆಯ ಆಧ್ಯಾತ್ಮಿಕ ಮಹತ್ವವನ್ನು ಶ್ರೀಗಳು ತಿಳಿಸಿದರು.

ನಂತರ ಧರ್ಮ ಸಂದೇಶ ನೀಡಿದ ಶ್ರೀಗಳು, ಇಷ್ಟಲಿಂಗ ದೀಕ್ಷೆಯ ನಂತರವೇ ಜಂಗಮ ವಟುಗಳು ಭಕ್ತರ ಮನೆಗಳಿಗೆ ತೆರಳಿ ಗದ್ದುಗೆ ಪೂಜೆ, ಪಾದಪೂಜೆ ಹಾಗೂ ಭಕ್ತರ ಮನೆಯಲ್ಲಿ ಪ್ರಸಾದ ಸೇವನೆಗೆ ಅರ್ಹರಾಗುತ್ತಾರೆ. ಈ ಕಾರಣದಿಂದ ಅಯ್ಯಾಚಾರ ಮತ್ತು ಇಷ್ಟಲಿಂಗ ದೀಕ್ಷೆ ಜಂಗಮ ಪರಂಪರೆಯ ಪ್ರಮುಖ ಸಂಸ್ಕಾರಗಳಲ್ಲಿ ಒಂದಾಗಿದೆ ಎಂದು ಹೇಳಿದರು.

ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಹಾಗೂ ಜಗಜ್ಯೋತಿ ಬಸವೇಶ್ವರರ ಪರಂಪರೆಯಲ್ಲಿಯೂ ಇಷ್ಟಲಿಂಗ ದೀಕ್ಷೆಗೆ ವಿಶೇಷ ಮಹತ್ವ ನೀಡಲಾಗಿದೆ. ಇಷ್ಟಲಿಂಗವು ಭಕ್ತ ಮತ್ತು ಶಿವನ ನಡುವಿನ ಆಧ್ಯಾತ್ಮಿಕ ಸಂಬಂಧದ ಸಂಕೇತವಾಗಿದ್ದು, ನಿತ್ಯ ಪೂಜೆ ಮಾಡುವುದರಿಂದ ಮನಸ್ಸಿನಲ್ಲಿ ಭಕ್ತಿ, ಶಾಂತಿ, ಶಿಸ್ತು ಹಾಗೂ ಧಾರ್ಮಿಕ ಚಿಂತನೆ ಬೆಳೆಯುತ್ತದೆ ಎಂದು ತಿಳಿಸಿದರು.

ಪ್ರತಿಯೊಬ್ಬರೂ ತಮ್ಮ ಮನೆಗಳಲ್ಲಿ ನಿತ್ಯ ಇಷ್ಟಲಿಂಗ ಪೂಜೆ ನೆರವೇರಿಸಿದ ನಂತರವೇ ದಿನನಿತ್ಯದ ಕಾರ್ಯಗಳನ್ನು ಆರಂಭಿಸುವ ಸಂಸ್ಕಾರ ಬೆಳೆಸಿಕೊಳ್ಳಬೇಕು. ಮನೆಯ ಹಿರಿಯರು ಮಕ್ಕಳಿಗಿಂತ ಮೊದಲು ಇಷ್ಟಲಿಂಗ ಪೂಜೆ ಮಾಡುವುದನ್ನು ರೂಢಿಸಿಕೊಳ್ಳುವುದರಿಂದ ಮಕ್ಕಳಲ್ಲಿಯೂ ಧಾರ್ಮಿಕ ಆಚರಣೆಗಳ ಬಗ್ಗೆ ಆಸಕ್ತಿ ಮತ್ತು ಭಕ್ತಿ ಮೂಡುತ್ತದೆ ಎಂದು ಹೇಳಿದರು.

ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕಲಿಸುವುದಷ್ಟೇ ಸಾಕಾಗುವುದಿಲ್ಲ. ಅದರೊಂದಿಗೆ ಮನೆತನದ ಸಂಸ್ಕಾರ, ಹಿರಿಯರಿಗೆ ಗೌರವ, ಧಾರ್ಮಿಕ ಆಚರಣೆಗಳು, ಪೂಜೆ-ಪುನಸ್ಕಾರಗಳ ಮಹತ್ವ ಹಾಗೂ ನಮ್ಮ ಪರಂಪರೆಯ ಪರಿಚಯವನ್ನು ನೀಡಬೇಕು. ಬಾಲ್ಯದಲ್ಲಿಯೇ ಇಂತಹ ಮೌಲ್ಯಗಳನ್ನು ಬೆಳೆಸಿದಾಗ ಅವರು ಉತ್ತಮ ಸಂಸ್ಕಾರವಂತ ನಾಗರಿಕರಾಗಿ ರೂಪುಗೊಳ್ಳಲು ಸಾಧ್ಯ ಎಂದು ಶ್ರೀಗಳು ತಿಳಿಸಿದರು.

ಇಷ್ಟಲಿಂಗವನ್ನು ಕೇವಲ ಧರಿಸುವುದಕ್ಕೆ ಸೀಮಿತಗೊಳಿಸದೆ, ಅದರ ನಿತ್ಯ ಪೂಜೆ, ಧ್ಯಾನ ಮತ್ತು ಅದರ ತಾತ್ವಿಕ ಸಂದೇಶವನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಧರ್ಮ ಮತ್ತು ಸಂಸ್ಕಾರಗಳು ಕುಟುಂಬವನ್ನು ಒಗ್ಗೂಡಿಸುವುದರ ಜೊತೆಗೆ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಮಾನವೀಯ ಮೌಲ್ಯಗಳನ್ನು ಬಲಪಡಿಸುತ್ತವೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ವೇ.ಮೂ. ಪಂಪಾಪತಿ ಶಾಸ್ತ್ರಿಗಳು ನಾಡಂಗದ ಹಿರೇಮಠ, ವೇ.ಮೂ. ರೇಣುಕಾರಾಧ್ಯಯ್ಯ ಸ್ವಾಮಿ, ವೇ.ಮೂ. ಸೋಮೇಶ್ವರ ಪ್ರಸಾದ, ಮಲ್ಲಿಕಾರ್ಜುನ ಸ್ವಾಮಿ ಶಾಖವಾದಿ, ಸುದೀಪ್ ಸ್ವಾಮಿ, ಚನ್ನಯ್ಯ ಸ್ವಾಮಿ, ಶ್ರವಣಕುಮಾರ ಸ್ವಾಮಿ, ಸಿದ್ದಮಲ್ಲ ಸ್ವಾಮಿ, ಮಂಜುನಾಥ ಸ್ವಾಮಿ ಕುಂಟ್ನಾಳ, ವೀರೇಶ ಸ್ವಾಮಿ ಆಲ್ಕೊಡಮಠ, ಪಿಕಳಿಹಾಳ ಅಯ್ಯಪ್ಪ ಸ್ವಾಮಿ ಹಿರೇಮಠ, ಜಿ. ಕೇಶವಮೂರ್ತಿ, ಸುಭಾಶ ಲಂಗೋಟಿ, ಶರಣಗೌಡ ಅರೋಳಿ, ಕಂತೆ ನಾಗರಾಜ ಸ್ವಾಮಿ, ಚಂದ್ರಶೇಖರ ಸ್ವಾಮಿ ಅರೋಳಿ ಸೇರಿದಂತೆ ಶ್ರೀಮಠದ ಸದ್ಭಕ್ತರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

# ಜನರ ಮನೆ ಬಾಗಿಲಿಗೇ ಆಡಳಿತ ತಲುಪಬೇಕು: ಶಾಸಕಿ ಕರೆಮ್ಮ ಜಿ. ನಾಯಕ



ದೇವದುರ್ಗ: ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೇ ನಿಜವಾದ ರಾಜರು. ಆದ್ದರಿಂದ ಅಧಿಕಾರಿಗಳು ಕಚೇರಿಗಳಲ್ಲಿ ಕುಳಿತು ಜನರು ತಮ್ಮ ಬಳಿಗೆ ಬರುವುದನ್ನು ಕಾಯದೆ, ಜನರ ಮನೆ ಬಾಗಿಲಿಗೆ ತೆರಳಿ ಅವರ ಸಮಸ್ಯೆಗಳನ್ನು ಆಲಿಸಿ ಪರಿಹಾರ ಕಲ್ಪಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಜನರಿಗೆ ತಮ್ಮ ಸಮಸ್ಯೆಗಳು ನಿಜವಾಗಿಯೂ ಬಗೆಹರಿಯುತ್ತವೆ ಎಂಬ ವಿಶ್ವಾಸ ಮೂಡಿದಾಗ ಮಾತ್ರ ಪ್ರಜಾ ಸೇವಾ ಆಂದೋಲನ ತನ್ನ ಉದ್ದೇಶ ಸಾಧಿಸುತ್ತದೆ ಎಂದು ಶಾಸಕಿ ಕರೆಮ್ಮ ಜಿ. ನಾಯಕ ಹೇಳಿದರು.

ಪಟ್ಟಣದಲ್ಲಿ ಆಯೋಜಿಸಲಾಗಿದ್ದ ತಾಲೂಕು ಮಟ್ಟದ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, 2023ರಿಂದಲೇ ಜನರಿಗೆ ಆಡಳಿತವನ್ನು ಇನ್ನಷ್ಟು ಸಮೀಪಿಸುವ ಉದ್ದೇಶದಿಂದ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಸರ್ಕಾರದ ಯೋಜನೆಗಳು ಕೇವಲ ಘೋಷಣೆಗಳಾಗಿ ಉಳಿಯದೆ, ಅರ್ಹ ಫಲಾನುಭವಿಗಳ ಮನೆಬಾಗಿಲಿಗೆ ತಲುಪುವಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಯಾವುದೇ ಯೋಜನೆ ಜಾರಿಯಾದ ನಂತರ ಅದರ ಪ್ರಯೋಜನ ನಿಜವಾಗಿ ಜನರಿಗೆ ತಲುಪಿದೆಯೇ, ಫಲಾನುಭವಿಗಳಿಗೆ ಅದರಿಂದ ಏನು ಅನುಕೂಲವಾಗಿದೆ, ಇನ್ನೂ ಯಾವ ಕೊರತೆಗಳಿವೆ ಎಂಬುದನ್ನು ಪರಿಶೀಲಿಸುವ ವ್ಯವಸ್ಥೆ ಇರಬೇಕು. ಸರ್ಕಾರದ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳು ಕೇವಲ ದಾಖಲೆ ಮಟ್ಟದಲ್ಲಿ ಕೆಲಸ ಮುಗಿಸದೇ, ನೆಲಮಟ್ಟದಲ್ಲಿ ಫಲಿತಾಂಶ ಕಾಣುವಂತೆ ಶ್ರಮಿಸಬೇಕು ಎಂದು ಹೇಳಿದರು.

ಪ್ರಜಾ ಸೇವಾ ಆಂದೋಲನದ ಉದ್ದೇಶ ಮತ್ತು ವಿಧಾನವನ್ನು ಅಧಿಕಾರಿಗಳು ಸಾರ್ವಜನಿಕರಿಗೆ ಸರಿಯಾಗಿ ಮನವರಿಕೆ ಮಾಡಿಕೊಡಬೇಕು. ಜನರು ತಮ್ಮ ಸಮಸ್ಯೆಗಳನ್ನು ಯಾವ ರೀತಿಯಲ್ಲಿ ಸಲ್ಲಿಸಬೇಕು, ಯಾವ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಹೇಗೆ ದಾಖಲಿಸಬೇಕು ಹಾಗೂ ಪರಿಹಾರ ಪ್ರಕ್ರಿಯೆ ಹೇಗೆ ನಡೆಯುತ್ತದೆ ಎಂಬುದರ ಬಗ್ಗೆ ಸ್ಪಷ್ಟ ಮಾಹಿತಿ ನೀಡಬೇಕು ಎಂದರು.

ಕ್ಷೇತ್ರದ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲೇ ವಾಸ್ತವ್ಯವಿದ್ದು, ಜನರ ಸಮಸ್ಯೆಗಳ ಕುರಿತು ನಿರಂತರವಾಗಿ ಮಾಹಿತಿ ಪಡೆದುಕೊಳ್ಳಬೇಕು. ತಮ್ಮೊಂದಿಗೆ ಸಮನ್ವಯ ಸಾಧಿಸಿ ಕ್ಷೇತ್ರದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಸರ್ಕಾರದ ಕಾರ್ಯಕ್ರಮ ಯಶಸ್ವಿಯಾಗಬೇಕಾದರೆ ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ದೇವದುರ್ಗ ಹಾಗೂ ಅರಕೆರಾ ತಾಲೂಕುಗಳು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರ್ಪಡೆಯಾಗುವಲ್ಲಿ ಅಧಿಕಾರಿಗಳ ಪ್ರಾಮಾಣಿಕ ಪ್ರಯತ್ನವೂ ಕಾರಣವಾಗಿದೆ. ಈಗ ಬರಗಾಲ ಪರಿಹಾರವನ್ನು ರೈತರಿಗೆ ಸಮರ್ಪಕವಾಗಿ ತಲುಪಿಸುವುದರ ಕಡೆಗೆ ಹೆಚ್ಚಿನ ಗಮನಹರಿಸಬೇಕು. ಯಾರೂ ಅರ್ಹತೆಯಿಂದ ವಂಚಿತರಾಗದಂತೆ ಕ್ರಮವಹಿಸಿ, ನಿಜವಾದ ರೈತರಿಗೆ ಪರಿಹಾರ ತಲುಪುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಕೆಇಬಿ ಇಲಾಖೆಯ ವಿದ್ಯುತ್ ವ್ಯತ್ಯಯದ ಕುರಿತು ರೈತರಿಂದ ಸಾಕಷ್ಟು ದೂರುಗಳು ಬರುತ್ತಿವೆ. ಕೃಷಿ ಜಮೀನುಗಳಿಗೆ ನೀರು ಹಾಯಿಸಲು ಹೆಚ್ಚಿನ ಅವಧಿಗೆ ವಿದ್ಯುತ್ ಅಗತ್ಯವಿದೆ ಎಂದು ರೈತರು ನಿರಂತರವಾಗಿ ಮನವಿ ಮಾಡುತ್ತಿದ್ದಾರೆ. ಈ ಸಮಸ್ಯೆ ಕುರಿತು ಸರ್ಕಾರದ ಗಮನಕ್ಕೆ ತಂದಿದ್ದು, ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ವಿದ್ಯುತ್ ಪೂರೈಕೆಯ ಅವಧಿ ಹೆಚ್ಚಿಸುವಂತೆ ಪತ್ರ ಬರೆದು ಮನವಿ ಮಾಡಲಾಗಿದೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಅನುದಾನವನ್ನು ಜನರ ಜೀವನಮಟ್ಟ ಸುಧಾರಣೆಗೆ ಬಳಸಬೇಕು. ವಿಶೇಷವಾಗಿ ಆರೋಗ್ಯ, ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಕ್ಷೇತ್ರದ ಜನರಿಗೆ ನೇರವಾಗಿ ಅನುಕೂಲವಾಗುವ ಕಾಮಗಾರಿಗಳು ಮತ್ತು ಯೋಜನೆಗಳಿಗೆ ಅನುದಾನವನ್ನು ಸದ್ಬಳಕೆ ಮಾಡುವುದು ತಮ್ಮ ಉದ್ದೇಶವಾಗಿದೆ ಎಂದು ಹೇಳಿದರು.

ಜನರ ಸಮಸ್ಯೆಗಳಿಗೆ ನೇರವಾಗಿ ಸ್ಪಂದಿಸಿ ಪರಿಹಾರ ಒದಗಿಸಲು ರೂಪಿಸಲಾಗಿರುವ ಪ್ರಜಾ ಸೇವಾ ಆಂದೋಲನದ ಉದ್ದೇಶ ಹೆಮ್ಮೆಪಡುವಂತದ್ದು. ಅಧಿಕಾರಿಗಳು ಮತ್ತು ಸಾರ್ವಜನಿಕರು ಪರಸ್ಪರ ವಿಶ್ವಾಸ ಹಾಗೂ ಸಮನ್ವಯದಿಂದ ಕಾರ್ಯನಿರ್ವಹಿಸಿದರೆ ಆಡಳಿತದ ಮೇಲೆ ಜನರ ನಂಬಿಕೆ ಇನ್ನಷ್ಟು ಬಲವಾಗುತ್ತದೆ ಎಂದು ಶಾಸಕಿ ಕರೆಮ್ಮ ಜಿ. ನಾಯಕ ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ, ಕಾರ್ಯನಿರ್ವಾಹಕ ಅಧಿಕಾರಿ ರಾಜೇಂದ್ರ ಕುಮಾರ, ರಾಜಕುಮಾರ ಡೊಣೀ, ಹಂಪಯ್ಯ ಕೆ., ಶ್ರೀನಿವಾಸ ನಾಯಕ, ಶಿವರಾಜ ಪೂಜಾರಿ, ಇರಾಲಾಲ್, ಮಹೇಶ ನಾಯಕ, ಟಿ. ಶ್ರೀನಿವಾಸ, ಮಹಮ್ಮದ್ ಅಲಿ, ಪಿಐ ಮಂಜುನಾಥ ಸೇರಿದಂತೆ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಕರ್ನಾಟಕ ಒನ್ ಆಪರೇಟರ್‌ಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಹುಣಸಿಹಾಳ ಹುಡಾದಲ್ಲಿ ಶ್ರೀ ಆಂಜನೇಯ ಸ್ವಾಮಿ ಪಲ್ಲಕ್ಕಿ ಉತ್ಸವ ವಿಜೃಂಭಣೆ



ರಾಯಚೂರು, ಸೆ.06: ತಾಲೂಕಿನ ಹುಣಿಸಿಹಾಳ ಹುಡಾ ಗ್ರಾಮದಲ್ಲಿ ಗ್ರಾಮದ ಆರಾಧ್ಯ ದೈವವಾದ ಶ್ರೀ ಆಂಜನೇಯ ಸ್ವಾಮಿಯ ಪಲ್ಲಕ್ಕಿ ಉತ್ಸವವು ಪ್ರತಿವರ್ಷದಂತೆ ಈ ವರ್ಷವೂ ಭಕ್ತಿಭಾವ, ಸಂಭ್ರಮ ಮತ್ತು ಸಡಗರದಿಂದ ವಿಜೃಂಭಣೆಯಿಂದ ಜರುಗಿತು.

ಉತ್ಸವದ ಅಂಗವಾಗಿ ಗ್ರಾಮದ ಭಕ್ತರು ಬೆಳಗ್ಗೆಯಿಂದಲೇ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡರು. ಶ್ರೀ ಆಂಜನೇಯ ಸ್ವಾಮಿಗೆ ವಿಶೇಷ ಪೂಜೆ, ಪುನಸ್ಕಾರ ಹಾಗೂ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸುವ ಮೂಲಕ ಉತ್ಸವಕ್ಕೆ ಚಾಲನೆ ನೀಡಲಾಯಿತು. ಬಳಿಕ ಗ್ರಾಮಸ್ಥರು ಒಟ್ಟಾಗಿ ಕಾಡ್ಲೂರು ಸಮೀಪದ ಕೃಷ್ಣಾ ನದಿಯ ತೀರದವರೆಗೆ ಪಾದಯಾತ್ರೆ ಕೈಗೊಂಡರು.

ಪಾದಯಾತ್ರೆಯ ಸಂದರ್ಭದಲ್ಲಿ ಭಕ್ತರು ಭಜನೆ, ದೇವರ ನಾಮಸ್ಮರಣೆ ಹಾಗೂ ಘೋಷಣೆಗಳೊಂದಿಗೆ ಸಾಗಿದ್ದು, ಭಕ್ತಿಪೂರ್ಣ ವಾತಾವರಣ ನಿರ್ಮಾಣವಾಗಿತ್ತು. ಕೃಷ್ಣಾ ನದಿಯ ತೀರದಲ್ಲಿ ಶ್ರೀ ಆಂಜನೇಯ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ, ಗ್ರಾಮದ ಸುಖ-ಶಾಂತಿ, ಸಮೃದ್ಧಿ ಹಾಗೂ ಎಲ್ಲರ ಆರೋಗ್ಯ ಮತ್ತು ಕಲ್ಯಾಣಕ್ಕಾಗಿ ಪ್ರಾರ್ಥಿಸಲಾಯಿತು.

ನಂತರ ಗ್ರಾಮಕ್ಕೆ ಮರಳಿದ ಭಕ್ತರು ಶ್ರೀ ಆಂಜನೇಯ ಸ್ವಾಮಿಯ ಪಲ್ಲಕ್ಕಿ ಉತ್ಸವವನ್ನು ಅದ್ದೂರಿಯಾಗಿ ನಡೆಸಿದರು. ಅಲಂಕೃತ ಪಲ್ಲಕ್ಕಿಯಲ್ಲಿ ಸ್ವಾಮಿಯ ಮೂರ್ತಿಯನ್ನು ಪ್ರತಿಷ್ಠಾಪಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು. ಪಲ್ಲಕ್ಕಿ ಸಾಗಿದ ಮಾರ್ಗದಾದ್ಯಂತ ಭಕ್ತರು ಪೂಜೆ ಸಲ್ಲಿಸಿ, ಹೂವು ಸಮರ್ಪಿಸಿ ತಮ್ಮ ಭಕ್ತಿಯನ್ನು ವ್ಯಕ್ತಪಡಿಸಿದರು.

ಭಜನೆ, ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳ ನಡುವೆ ನಡೆದ ಪಲ್ಲಕ್ಕಿ ಉತ್ಸವದಿಂದ ಇಡೀ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಮಹಿಳೆಯರು, ಮಕ್ಕಳು, ಯುವಕರು ಹಾಗೂ ಹಿರಿಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಉತ್ಸವದ ಸಂಭ್ರಮವನ್ನು ಹೆಚ್ಚಿಸಿದರು.

ಶ್ರೀ ಆಂಜನೇಯ ಸ್ವಾಮಿಯ ಕೃಪೆಗೆ ಪಾತ್ರರಾಗಲು ಭಕ್ತರು ಭಕ್ತಿಪೂರ್ವಕವಾಗಿ ಪೂಜಾ ಕೈಂಕರ್ಯಗಳಲ್ಲಿ ಭಾಗವಹಿಸಿದರು. ಗ್ರಾಮಸ್ಥರ ಪರಸ್ಪರ ಸಹಕಾರ ಮತ್ತು ಒಗ್ಗಟ್ಟಿನೊಂದಿಗೆ ಉತ್ಸವವನ್ನು ಯಶಸ್ವಿಯಾಗಿ ನಡೆಸಲಾಯಿತು.

ಹುಣಿಸಿಹಾಳ ಹುಡಾ ಗ್ರಾಮದವರ ಜೊತೆಗೆ ಸುತ್ತಮುತ್ತಲಿನ ಗ್ರಾಮಗಳು ಹಾಗೂ ವಿವಿಧ ಪ್ರದೇಶಗಳಿಂದ ಆಗಮಿಸಿದ್ದ ಭಕ್ತರೂ ಪಲ್ಲಕ್ಕಿ ಉತ್ಸವದಲ್ಲಿ ಪಾಲ್ಗೊಂಡು ಸ್ವಾಮಿಯ ದರ್ಶನ ಪಡೆದರು. ಭಕ್ತರ ಹೆಚ್ಚಿನ ಸಂಖ್ಯೆಯ ಭಾಗವಹಿಸುವಿಕೆಯಿಂದ ಉತ್ಸವಕ್ಕೆ ಮತ್ತಷ್ಟು ಮೆರುಗು ಬಂದಿತು.

ಪ್ರತಿವರ್ಷ ನಡೆಯುವ ಈ ಪಲ್ಲಕ್ಕಿ ಉತ್ಸವವು ಗ್ರಾಮದ ಧಾರ್ಮಿಕ ಪರಂಪರೆ, ಭಕ್ತಿ ಮತ್ತು ಸಾಮೂಹಿಕ ಒಗ್ಗಟ್ಟಿನ ಪ್ರತೀಕವಾಗಿ ಮುಂದುವರಿದಿದ್ದು, ಈ ಬಾರಿಯ ಉತ್ಸವವೂ ಭಕ್ತರ ಶ್ರದ್ಧಾ-ಭಕ್ತಿಯ ನಡುವೆ ಯಶಸ್ವಿಯಾಗಿ ನೆರವೇರಿತು.

# ಪ್ರಜಾ ಸೇವಾ ಅಭಿಯಾನ ಉದ್ಘಾಟನೆಯಲ್ಲೇ ಅರೆಬೆತ್ತಲೆ ಪ್ರತಿಭಟನೆಗೆ ಮುಂದಾದ ವ್ಯಕ್ತಿ



ಲಿಂಗಸುಗೂರು, ಸೆ.6: ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಪರಿಹಾರ ಕಲ್ಪಿಸುವ ಉದ್ದೇಶದಿಂದ ಸರ್ಕಾರ ಜಾರಿಗೆ ತಂದಿರುವ ಪ್ರಜಾ ಸೇವಾ ಅಭಿಯಾನದ ಉದ್ಘಾಟನಾ ಕಾರ್ಯಕ್ರಮದ ಸಂದರ್ಭದಲ್ಲೇ, ಪುರಸಭೆಯಿಂದ ತಮಗೆ ಅನ್ಯಾಯವಾಗಿದೆ ಎಂದು ಆರೋಪಿಸಿ ವ್ಯಕ್ತಿಯೊಬ್ಬರು ಅರೆಬೆತ್ತಲೆ ಪ್ರತಿಭಟನೆಗೆ ಮುಂದಾದ ಘಟನೆ ಶನಿವಾರ ಲಿಂಗಸುಗೂರಿನಲ್ಲಿ ನಡೆದಿದೆ.

ಲಿಂಗಸುಗೂರು ತಾಲೂಕಿನ ಹಿರೇಹೆಸರೂರು ಗ್ರಾಮದ ನಿವಾಸಿ ಶ್ರೀನಿವಾಸ ತಂದೆ ಕಿಶನ್‌ರಾವ್ ಅವರು, ಲಿಂಗಸುಗೂರು ಪುರಸಭೆ ವ್ಯಾಪ್ತಿಯ 7ನೇ ವಾರ್ಡ್‌ನಲ್ಲಿ ತಾವು ಖರೀದಿಸಿರುವ ನಿವೇಶನವನ್ನು ಬೇರೊಬ್ಬರ ಹೆಸರಿಗೆ ನೋಂದಾಯಿಸಲಾಗಿದೆ ಎಂದು ಆರೋಪಿಸಿದರು. ನಿವೇಶನಕ್ಕೆ ಸಂಬಂಧಿಸಿದ ದಾಖಲೆಗಳು ತಮ್ಮ ಬಳಿ ಇದ್ದರೂ, ಪುರಸಭೆ ದಾಖಲೆಗಳಲ್ಲಿ ಹೆಸರು ಬದಲಾವಣೆ ಮಾಡಲಾಗಿದೆ ಎಂಬುದು ಅವರ ಆಕ್ಷೇಪವಾಗಿದೆ.

ಈ ವಿಷಯಕ್ಕೆ ಸಂಬಂಧಿಸಿದಂತೆ ಹಲವು ಬಾರಿ ಪುರಸಭೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ರೀತಿಯ ಸ್ಪಂದನೆ ಸಿಕ್ಕಿಲ್ಲ. ಸಮಸ್ಯೆ ಪರಿಹಾರಕ್ಕಾಗಿ ಕಚೇರಿಗೆ ಅಲೆದು ಅಲೆದು ಬೇಸತ್ತು ಹೋಗಿದ್ದೇನೆ. ನ್ಯಾಯ ದೊರಕಿಸಿಕೊಡಬೇಕು ಎಂದು ಆಗ್ರಹಿಸಿ ಅವರು ಸಂಬಂಧಿತ ದಾಖಲೆಗಳೊಂದಿಗೆ ಪ್ರಜಾ ಸೇವಾ ಅಭಿಯಾನದ ಉದ್ಘಾಟನಾ ಕಾರ್ಯಕ್ರಮಕ್ಕೆ ಆಗಮಿಸಿದ್ದರು.

ಕಾರ್ಯಕ್ರಮ ನಡೆಯುತ್ತಿದ್ದ ವೇಳೆ ತಮ್ಮ ಸಮಸ್ಯೆಯನ್ನು ಅಧಿಕಾರಿಗಳ ಗಮನಕ್ಕೆ ತರಲು ಶ್ರೀನಿವಾಸ ಅವರು ಅರೆಬೆತ್ತಲೆ ಪ್ರತಿಭಟನೆಗೆ ಮುಂದಾದರು. ಇದರಿಂದ ಕಾರ್ಯಕ್ರಮದ ಸ್ಥಳದಲ್ಲಿ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು. ತಮ್ಮ ನಿವೇಶನದ ವಿಷಯದಲ್ಲಿ ಆಗಿರುವ ಅನ್ಯಾಯವನ್ನು ಸರಿಪಡಿಸಬೇಕು ಹಾಗೂ ಪುರಸಭೆ ದಾಖಲೆಗಳನ್ನು ಪರಿಶೀಲಿಸಿ ನ್ಯಾಯ ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಆಗಮಿಸಿದ ಸಹಾಯಕ ಆಯುಕ್ತರು ಶ್ರೀನಿವಾಸ ಅವರೊಂದಿಗೆ ಮಾತನಾಡಿ ಮನವರಿಕೆ ಮಾಡಿದರು. ಸಮಸ್ಯೆಯನ್ನು ಪ್ರತಿಭಟನೆಯ ಮೂಲಕ ಮುಂದುವರಿಸುವ ಬದಲು, ಪ್ರಜಾ ಸೇವಾ ಅಭಿಯಾನದ ಮೂಲಕ ಅಧಿಕೃತವಾಗಿ ದೂರು ಸಲ್ಲಿಸುವಂತೆ ಸೂಚಿಸಿದರು.

ದೂರು ಹಾಗೂ ಸಂಬಂಧಿತ ದಾಖಲೆಗಳನ್ನು ಪರಿಶೀಲಿಸಿ, ನಿಯಮಾನುಸಾರ ವಿಚಾರಣೆ ನಡೆಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಸಂಬಂಧಪಟ್ಟ ಪುರಸಭೆ ಅಧಿಕಾರಿಗಳಿಂದ ಮಾಹಿತಿ ಪಡೆದು ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಲಾಗುವುದು ಎಂದು ಸಹಾಯಕ ಆಯುಕ್ತರು ಭರವಸೆ ನೀಡಿದರು.

ಪ್ರಜಾ ಸೇವಾ ಅಭಿಯಾನವು ಸಾರ್ವಜನಿಕರ ಕುಂದುಕೊರತೆಗಳನ್ನು ಒಂದೇ ವೇದಿಕೆಯಲ್ಲಿ ಸ್ವೀಕರಿಸಿ, ಅವುಗಳಿಗೆ ಸಾಧ್ಯವಾದಷ್ಟು ತ್ವರಿತವಾಗಿ ಪರಿಹಾರ ಕಲ್ಪಿಸುವ ಉದ್ದೇಶ ಹೊಂದಿದೆ. ಹೀಗಾಗಿ ತಮ್ಮ ಅಹವಾಲನ್ನು ದಾಖಲೆಗಳೊಂದಿಗೆ ಸಲ್ಲಿಸಿದರೆ ಪರಿಶೀಲನೆಗೆ ಅನುಕೂಲವಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದರು.

ಸಹಾಯಕ ಆಯುಕ್ತರ ಭರವಸೆ ಹಾಗೂ ಮನವೊಲಿಕೆಯ ಬಳಿಕ ಶ್ರೀನಿವಾಸ ಅವರು ಅರೆಬೆತ್ತಲೆ ಪ್ರತಿಭಟನೆಯಿಂದ ಹಿಂದೆ ಸರಿದರು. ಬಳಿಕ ತಮ್ಮ ಸಮಸ್ಯೆಗೆ ಸಂಬಂಧಿಸಿದ ದಾಖಲೆಗಳನ್ನು ಅಧಿಕಾರಿಗಳ ಮುಂದಿಟ್ಟು, ನ್ಯಾಯಸಮ್ಮತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರ ನೀಡಲು ಆಯೋಜಿಸಲಾಗಿದ್ದ ಪ್ರಜಾ ಸೇವಾ ಅಭಿಯಾನದ ಉದ್ಘಾಟನಾ ಕಾರ್ಯಕ್ರಮದಲ್ಲೇ ಪುರಸಭೆಯ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿ ವ್ಯಕ್ತಿಯೊಬ್ಬರು ಪ್ರತಿಭಟನೆಗೆ ಮುಂದಾದ ಘಟನೆ ಸ್ಥಳದಲ್ಲಿದ್ದ ಸಾರ್ವಜನಿಕರ ಗಮನ ಸೆಳೆಯಿತು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K